# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 233 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 03–04–2024 ಬುಧವಾರ | ಪುಟ: 4 | ಬೆಲೆ : ರೂ.2–00
Volume - 01 Issue - 233 | Title- Code: KARKAN 28269 | Chitradurga | Date: 03-04-2024 Wednesday | Page: 4 | Price: Rs. 2-00



ಒಳಪುಟದ ಸುದ್ದಿಗಳು
ಪೊಲೀಸ್, ಗಣಿ ಇಲಾಖೆ ಕಾರ್ಯಾಚರಣೆ ಅಕ್ರಮ ಮರಳು ದಾಸ್ತಾನು ಪತ್ತೆ 2
ಪೊಲೀಸರ ಬೊಜ್ಜಿನ ಸಮಸ್ಯೆಗೆ ವಿನೂತನ ಪ್ರಯತ್ನ 3
ಬೇಸಿಗೆಯ ರಜೆಯಲ್ಲಿ ಮಕ್ಕಳ ಚಟುವಟಿಕೆಗಳ ಬಗ್ಗೆ ಇರಲಿ ನಿಗಾ 4



ಸುದ್ದಿ, ಜಾಹಿರಾತಿಗೆ 9686622252


## ಶುಭ ನುಡಿ

ಬಟ್ಟೆ ನೋಡಿ ಗೆಳೆತನ ಮಾಡಬೇಡ,
ಗುಣ ನೋಡಿ ಗೆಳೆತನ ಮಾಡು ,
ಯಾಕೆಂದರೆ ಬಟ್ಟೆ ಹರಿದು ಹೋಗುವ
ತನಕ ಮಾತ್ರ ಇರುತ್ತದೆ, ಗುಣ
ಸಾಯುವವರೆಗೂ ಇರುತ್ತದೆ !!

» ಶುಭೋದಯ

# ಶುದ್ಧ ಕುಡಿಯುವ ನೀರು ಒದಗಿಸಲು ಅಗತ್ಯ ಕ್ರಮ

» ಚಿತ್ರದುರ್ಗ

ಪ್ರಸಕ್ತ ಬೇಸಿಗೆಯಲ್ಲಿ ಚಿತ್ರದುರ್ಗ ಜಿಲ್ಲೆಯ ನಗರ, ಪಟ್ಟಣ ಮತ್ತು ಗ್ರಾಮಾಂತರ ಪ್ರದೇಶಗಳಲ್ಲಿನ ನಿವಾಸಿಗಳಿಗೆ ಕುಡಿಯುವ ನೀರಿನ ಸಮಸ್ಯೆ ಎದುರಾಗದಂತೆ ತಕ್ಷಣದ ಕ್ರಮಗಳನ್ನು ಕೈಗೊಳ್ಳುವಂತೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅವರು ಸಂಬಂಧಿತ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.

ಅವರು ಇಂದು ತಮ್ಮ ಕಚೇರಿ ಸಭಾಂಗಣದಲ್ಲಿ ಬರ ಹಾಗೂ ಗ್ರಾಮೀಣ ಪ್ರದೇಶಗಳಿಗೆ ಶುದ್ಧ ಕುಡಿಯುವ ನೀರು ಸರಬರಾಜು ಮಾಡುವ ಕುರಿತು ಏರ್ಪಡಿಸಲಾಗಿದ್ದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡುತ್ತಿದ್ದರು. ಅಗತ್ಯವಿರುವಲ್ಲಿ ಆಯಾ ಪ್ರದೇಶದ ವ್ಯಾಪ್ತಿಯ ಅಧಿಕಾರಿಗಳು ಖುದ್ದು ಸ್ಥಳಕ್ಕೆ ಭೇಟಿ ನೀಡಿ ಸಮಸ್ಯೆಗೆ ಸಕಾಲಿಕ ಪರಿಹಾರ ನೀಡುವಂತೆ ಅವರು ಸೂಚಿಸಿದರು.

ಈಗಾಗಲೇ ಜಿಲ್ಲೆಯ ಹಲವು ಪ್ರದೇಶಗಳಿಂದ ನಿರಂತರ ನೀರು ಸರಬರಾಜಿನಲ್ಲಿ ವ್ಯತ್ಯಯಗಳಾಗುತ್ತಿರುವ ಬಗ್ಗೆ ದೂರುಗಳು ಬರುತ್ತಿವೆ. ಈ ದೂರುಗಳು ಪುನರಾವರ್ತನೆಯಾಗದಂತೆ ಅಧಿಕಾರಿಗಳು ಕ್ರಮ ಕೈಗೊಳ್ಳುವಂತೆ ಸೂಚಿಸಿದ ಅವರು, ಇಂತಹ ಸಂದಿಗ್ಧ ಸಂದರ್ಭದಲ್ಲಿ ಅಧಿಕಾರಿಗಳು



ಮಾನವೀಯ ನೆಲೆಯಲ್ಲಿ ತಮ್ಮ ಜವಾಬ್ದಾರಿಯರಿತು ಪ್ರಾಮಾಣಿಕವಾಗಿ ಕಾರ್ಯನಿರ್ವಹಿಸಬೇಕು. ಬಳಲಿದವರಿಗೆ ಶುದ್ಧ ಕುಡಿಯುವ ನೀರು ನೀಡಿ, ದಾಹ ಇಂಗಿಸಿದ ಹೆಮ್ಮೆ ನಿಮಗಿರಲಿ ಎಂದವರು ನುಡಿದರು.ಈಗಾಗಲೇ ನೀರಿನ ಸಮಸ್ಯೆ ತಲೆದೋರಿರುವ ಗ್ರಾಮಗಳಲ್ಲಿ ನೀರನ್ನು ಒದಗಿಸಲು ಕೂಡಲೇ ಕ್ರಮ ಕೈಗೊಳ್ಳಬೇಕು. ಸ್ಥಳೀಯವಾಗಿ ಲಭ್ಯವಿರುವ ಕೆರೆ, ಬೋರ್‌ವೆಲ್‌ಗಳಲ್ಲಿನ ನೀರನ್ನು ಟ್ಯಾಂಕರ್ ಮೂಲಕ ಒದಗಿಸಲು ಕ್ರಮ ಕೈಗೊಳ್ಳಬೇಕು. ಟ್ಯಾಂಕರ್ ಮೂಲಕ ನೀರು ಒದಗಿಸಲು ಸರ್ಕಾರ ಈಗಾಗಲೇ ದರ ನಿಗಧಿಪಡಿಸಿದೆ. ಅದರಂತೆಯೇ ಅಧಿಕಾರಿಗಳು ದರ ನಿಗಧಿಪಡಿಸಬೇಕು. ನೀರು ಸರಬರಾಜಿಗೆ ಸಂಬಂಧಿಸಿದಂತೆ ಅಧಿಕಾರಿಗಳು ಸೂಕ್ತ ದಾಖಲೆಗಳನ್ನು ನಿರ್ವಹಿಸಬೇಕು. ಅಲ್ಲದೆ ಆನ್‌ಲೈನ್‌ನಲ್ಲಿ ದಾಖಲೆಗಳನ್ನು ನಿರ್ವಹಿಸಬೇಕು. ನೀರನ್ನು ಒದಗಿಸುವ ಟ್ಯಾಂಕರ್‌ಗಳಿಗೆ ಕಡ್ಡಾಯವಾಗಿ ಜಿ.ಪಿ.ಎಸ್.ತಂತ್ರಾಂಶವನ್ನು ಅಳವಡಿಸುವಂತೆ ಸೂಚಿಸಿದ ಅವರು ಇದರ ವ್ಯವಸ್ಥಿತ ನಿರ್ವಹಣೆಗಾಗಿ ನೋಡಲ್ ಅಧಿಕಾರಿಗಳನ್ನು ನೇಮಿಸಲಾಗಿದೆ ಎಂದವರು ನುಡಿದರು.

ನೀರು ಸರಬರಾಜು ಮಾಡಿರುವ ಸಂಸ್ಥೆಗಳಿಗೆ ಸಕಾಲದಲ್ಲಿ ಹಣ ಪಾವತಿ ಮಾಡಿ. ಬರ ನಿರ್ವಹಣೆಗೆ ಸಂಬಂಧಿಸಿದಂತೆ ತಾಲೂಕು ಮಟ್ಟದ ಅಧಿಕಾರಿಗಳ ಬೇಡಿಕೆಯಂತೆ ಹಣ ಬಿಡುಗಡೆಗೊಳಿಸಲಾಗುವುದು. ಜಿಲ್ಲೆಯಲ್ಲಿ ಎಲ್ಲಿಯೂ ನೀರು ಸರಬರಾಜಿನಲ್ಲಿ ಯಾವುದೇ ಸಣ್ಣ ಲೋಪವೂ ಆಗದಂತೆ ಹಾಗೂ ಸಾರ್ವಜನಿಕ ವಲಯದಿಂದ ದೂರುಗಳು ಬರದಂತೆ ಕ್ರಮವಹಿಸುವಂತೆ ಅವರು ಸೂಚಿಸಿದರು.ಬೇಸಿಗೆ ಬಿಸಿಲು ಹೆಚ್ಚಾಗಿರುವುದರಿಂದ ಡಿಹೈಡ್ರೇಶನ್, ಸಾಂಕ್ರಾಮಿಕ ರೋಗಗಳು ಹೆಚ್ಚಾಗಬಹುದಾದ ಸಂಭವವಿದ್ದು, ಸಂಬಂಧಿಸಿದ ಆರೋಗ್ಯ ಇಲಾಖೆಯ ಅಧಿಕಾರಿಗಳು ಹಾಗೂ ಗ್ರಾಮ ಮಟ್ಟದ ಅಧಿಕಾರಿಗಳು ಜನರಿಗೆ ಸರಿಯಾದ ಅರಿವು ಮೂಡಿಸಬೇಕು. ಚರಂಡಿಗಳು, ರಸ್ತೆ ಬದಿಗಳು, ನೀರಿನ ಟ್ಯಾಂಕರ್, ಬೋರ್‌ವೆಲ್‌ಗಳನ್ನು ಸ್ವಚ್ಛಗೊಳಿಸಿ ಗ್ರಾಮವನ್ನು ಶುಚಿಯಾಗಿಟ್ಟುಕೊಳ್ಳುವಂತೆ ಅವರು ಸೂಚಿಸಿದರು.ಸ' ಭ ' ೦ುೆ'ು ಲ್ಲಿ ಜಿಪಂ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್, ಅಪರ ಜಿಲ್ಲಾಧಿಕಾರಿ ಬಿ.ಟಿ. ಕುಮಾರಸ್ವಾಮಿ, ಉಪವಿಭಾಗಾಧಿಕಾರಿ ಎಂ.ಕಾರ್ತೀಕ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಕಾರ್ಯಪಾಲಕ ಅಭಿಯಂತರ ಬಸವನಗೌಡ, ಜಂಟಿ ಇಲಾಖೆಯ ಜಂಟಿ ನಿರ್ದೇಶಕ ಮಂಜುನಾಥ್, ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಹಿರಿಯ ಅಧಿಕಾರಿಗಳು, ಜಿಲ್ಲೆಯ ಎಲ್ಲಾ ತಾಲೂಕುಗಳ ತಹಶೀಲ್ದಾರರು, ಕಾರ್ಯನಿರ್ವಾಹಕ ಅಧಿಕಾರಿಗಳು ಉಪಸ್ಥಿತರಿದ್ದರು.




ಜಿಲ್ಲಾ ವ್ಯವಸ್ಥಿತ ಮತದಾರ ಜಾಗೃತಿ ಮತ್ತು ಪಾಲ್ಗೊಳ್ಳುವಿಕೆ ಕಾರ್ಯಕ್ರಮದ ಭಾಗವಾಗಿ ನಿನ್ನೆ ಸಂಜೆ ನಗರದ ಮದಕರಿ ಸರ್ಕಲ್‌ನಿಂದ ಕ್ಯಾಂಡಲ್‌ಲೈಟ್ ಜಾಥಾವನ್ನು ಏರ್ಪಡಿಸಲಾಗಿತ್ತು. ಜಿಲ್ಲಾಧಿಕಾರಿ ಟಿ.ವೆಂಕಟೇಶ್, ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ನಗರಸಭೆ ಆಯುಕ್ತೆ ಶ್ರೀಮತಿ ರೇಣುಕಾ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿ-ಸಿಬ್ಬಂದಿಗಳು ಉಪಸ್ಥಿತರಿದ್ದರು.

## ಕಾಂಗ್ರೆಸ್ ಪಕ್ಷದಿಂದ ಸಾಮಾಜಿಕ ನ್ಯಾಯ ದೊರಕಿಲ್ಲ: ವೆಂಕಟರಮಣಪ್ಪ



» ಚಿತ್ರದುರ್ಗ

ಕಾಂಗ್ರೆಸ್ ಪಕ್ಷ ಸಾಮಾಜಿಕ ನ್ಯಾಯದಡಿ ಎಲ್ಲಾರಿಗೂ ಅವಕಾಶ ಮಾಡಿಕೊಡುತ್ತೇವೆ ಎಂದು ಮಾತು ಕೊಟ್ಟು ಈಗ ಭೋವಿ ಸಮಾಜವನ್ನು ಕಡೆಗಣಿಸಲಾಗಿದೆ, ನಮ್ಮ ಸಮಾಜಕ್ಕೆ ರಾಜ್ಯದಲ್ಲಿ ಒಬ್ಬರಿಗೂ ಲೋಕಸಭೆಯಲ್ಲಿ ಪ್ರಾಧ್ಯಾನತೆ ನೀಡಿಲ್ಲ ಎಂದು ಮಾಜಿ ಸಚಿವ ವೆಂಕಟರಮಣಪ್ಪ ಅಸಮಾಧಾನ ಹೊರ ಹಾಕಿದರು. ಮಂಗಳವಾರ ನಗರದ ಪತ್ರಿಕಾ ಭವನದಲ್ಲಿ ಪತ್ರಿಕಾಗೋಷ್ಠಿ ನಡೆಸಿ ಮಾತನಾಡಿ ಕಾಂಗ್ರೆಸ್ ಸಾಮಾಜಿಕ ನ್ಯಾಯ ನೀಡುವಲ್ಲಿ ತಾರತಮ್ಯ ಮಾಡಿದೆ.ಭೋವಿ ಸಮಾಜವಕ್ಕೆ ಯಾವುದೇ ಸ್ಥಾನಮಾನಗಳು ನೀಡುತ್ತದೇ ಸಮಾಜಕ್ಕೆ ಅನ್ಯಾಯ ಮಾಡುತ್ತಿರುವುದು ನೋವು ತರಿಸಿದೆ. ರಾಜ್ಯದಲ್ಲಿ ಒಬ್ಬ ಎಂಎಲ್ಸಿ, ರಾಜ್ಯಸಭೆ, ಲೋಕಸಭೆ ಸೇರಿ ಯಾವುದಕ್ಕೂ ಭೋವಿ ಸಮಾಜಕ್ಕೆ ಪ್ರಾಧ್ಯಾನತೆ ಇಲ್ಲದಾಗಿದೆ.


ಪುಟ 3


## ಪ್ರಮುಖ ಸುದ್ದಿ

### ನಾನು ಮುಖ್ಯಮಂತ್ರಿ ಆಗಿರುವುದು, ಮೋದಿ ಪ್ರಧಾನಮಂತ್ರಿ ಆಗಿರುವುದಕ್ಕೆ ನಮ್ಮ ಸಂವಿಧಾನ ಕಾರಣ: ಸಿ.ಎಂ.ಸಿದ್ದರಾಮಯ್ಯ

# ಬಿಜೆಪಿ ಸಂವಿಧಾನ ಬದಲಾವಣೆ ಅಜೆಂಡಾ ಇಟ್ಟುಕೊಂಡಿದೆ

### ಮೋದಿ ಅವರ ಅವಧಿಯಲ್ಲಿ ಇಡೀ ದೇಶದಲ್ಲಿ ಸ್ಕಾಲರ್ ಶಿಪ್‌ಗೆ ಯಾವ ಗತಿ ಆಯ್ತು ಅಂತ ನೋಡಿದ್ದೀರಲ್ಲಾ?
### ಈ ಸಂವಿಧಾನ ಬದಲಾದರೆ ದೇಶದ ದಲಿತರು, ಶೂದ್ರರು, ಮಹಿಳೆಯರು ಮತ್ತು ಶ್ರಮಿಕವರ್ಗಗಳಿಗೆ ಉಳಿಗಾಲವಿಲ್ಲ

» ಮೈಸೂರು

ನಮ್ಮ ಸಂವಿಧಾನ ಬದಲಾವಣೆಗೆ ಮುಂದಾದರೆ ಪರಿಸ್ಥಿತಿ ನೆಟ್ಟಗಿರಲ್ಲ. ನಮ್ಮ ಸಂವಿಧಾನದ ಸ್ವರೂಪ ಬದಲಾಯಿಸಿ ದೇಶದ ದುಡಿಯುವ ರ್ಗಗಳಿಗೆ ವಂಚಿಸಿದರೆ ದೇಶದ ಪರಿಸ್ಥಿತಿ ಬಿಗಡಾಯಿಸುತ್ತದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಬಿಜೆಪಿಗೆ ನೇರ ಎಚ್ಚರಿಸಿದರು.

ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ನಡೆದ ಕರ್ಯಕ್ರಮದಲ್ಲಿ 45 ಕ್ಕೂ ಹೆಚ್ಚು ಮಂದಿ ಹೋಬಳಿ ಮಟ್ಟದ ಮುಖಂಡರುಗಳನ್ನು ಹಾಗೂ ಮಾಜಿ ಕೇಂದ್ರ ಸಚಿವ ಶ್ರೀನಿವಾಸ್ ಪ್ರಸಾದ್ ಅವರ ಆತ್ಮೀಯರು ಮತ್ತು ಸಂಬಂಧಿಗಳನ್ನು ಕಾಂಗ್ರೆಸ್ ಪಕ್ಷಕ್ಕೆ ಬರಮಾಡಿಕೊಂಡ ಬಳಿಕ ಮಾತನಾಡಿದರು.

ನಾನು ಮುಖ್ಯಮಂತ್ರಿ ಆಗಿರುವುದಕ್ಕೆ, ಮೋದಿ ಪ್ರಧಾನಮಂತ್ರಿ ಆಗಿರುವುದಕ್ಕೆ ನಮ್ಮ ಸಂವಿಧಾನ ಕಾರಣ ಎಂದು ಸಿ.ಎಂ.ಸಿದ್ದರಾಮಯ್ಯ ಪ್ರತಿಪಾದಿಸಿದರು.



ಬಿಜೆಪಿ ನಮ್ಮ ಈ ಸಂವಿಧಾನ ಬದಲಾವಣೆಯಅಜೆಂಡಾ ಇಟ್ಟುಕೊಂಡಿದೆ. ಈ ಸಂವಿಧಾನ ಬದಲಾದರೆ ದೇಶದ ದಲಿತರು, ಶೂದ್ರರು, ಮಹಿಳೆಯರು ಮತ್ತು ಶ್ರಮಿಕ ರ್ಗಗಳಿಗೆ ಉಳಿಗಾಲವಿಲ್ಲ. ಆದ್ದರಿಂದ ನಾವೆಲ್ಲಾ ಉಳಿಯಬೇಕಾದರೆ ಸಂವಿಧಾನ ಉಳಿಯಬೇಕು. ಸಂವಿಧಾನ ಉಳಿಯಬೇಕು ಎಂದರೆ ಬಿಜೆಪಿ ಸೋಲಬೇಕು ಎನ್ನುವ ಪಣ ತೊಡಿ ಎಂದರು.

ಮೋದಿ ಅವರ ಅವಧಿಯಲ್ಲಿ ಇಡೀ ದೇಶದಲ್ಲಿ ಸ್ಕಾಲರ್ ಶಿಪ್ ಗೆ ಯಾವ ಗತಿ ಆಯ್ತು ಅಂತ ನೋಡಿದ್ದೀರಲ್ಲಾ? ಮತ್ತೇಕೆ ಬಿಜೆಪಿ ಕಡೆ ಮುಖ ಮಾಡಬೇಕು ಎಂದು ಪ್ರಶ್ನಿಸಿದರು.

**ಶೂದ್ರರಿಗೆ ಃಎಕ–ಖುಖು ನ ರ್ಗುಡಿಯೊಳಗೆ ಪ್ರವೇಶವೇ ಇಲ್ಲ: ಸಿ.ಎಂ.ಎಚ್ಚರಿಕೆ:** ಶೂದ್ರರಿಗೆ ಃಎಕ–ಖುಖು ನ ರ್ಗುಡಿಯೊಳಗೆ ಪ್ರವೇಶವೇ ಇಲ್ಲ. ಶೂದ್ರರು, ದಲಿತರನ್ನು ಕೇವಲಿ ಬಳಸಿಕೊಳ್ಳುತ್ತಾರೆ ಆದರೆ ಖುಖು ನ ಒಳಗೆ ಪ್ರವೇಶ ಕೊಡುವುದಿಲ್ಲ. ಆದ್ದರಿಂದ ಖುಖು ಕಡೆಗೆ ತಲೆ ಕೂಡ ಹಾಕಬೇಡಿ ಎಂದು ಕರೆ ನೀಡಿದರು.

**ಮಂಡಲ್ ವರದಿ ವೇಳೆ ಶೂದ್ರರು ಸಾವಿಗೆ ಕಾರಣರಾದವರು ಇವರೇ ತಾನೇ?:** ದಲಿತರು, ಶೂದ್ರರು, ಹಿಂದುಳಿದವರ ವಿರೋಧಿಯಾದ ಃಎಕ–ಖುಖು ಮೀಸಲಾತಿಯನ್ನೂ ವಿರೋಧಿಸುತ್ತದೆ. ಮಂಡಲ್ ವರದಿ ವೇಳೆ ಶೂದ್ರರು ಸಾವಿಗೆ ಕಾರಣರಾದವರು, ನಮ್ಮವರು ಬೆಂಕಿ ಹಚ್ಚಿಕೊಂಡು ಸಾಯುವಂತೆ ಮಾಡಿದವರು ಇವರೇ ತಾನೇ? ನಮ್ಮ ಶತ್ರುಗಳ ಜತೆಗೆ ಈ ದೇಶದ ಶೂದ್ರರು, ದಲಿತರು, ಹಿಂದುಳಿದವರು ಏಕೆ ಹೋಗಬೇಕು ಎಂದು ಪ್ರಶ್ನಿಸಿದರು.

ಡಾ.ಬಾಬಾ ಸಾಹೇಬ್ ಅಂಬೇಡ್ಕರ್ ಅವರು ನಾನು ಹಿಂದುವಾಗಿ ಸಾಯುವುದಿಲ್ಲ ಎಂದು ಹೇಳಿ ಬೌದ್ಧ ರ್ಮಕ್ಕೆ ಹೋಗಿದ್ದಕ್ಕೆ ಮುಖ್ಯ ಕಾರಣ ಜಾತಿ ಅಸಮಾನತೆ, ಮತ್ತು ಸಾಮಾಜಿಕ ಅಸಮಾನತೆಯೇ ಕಾರಣ ಎಂದರು.

**ರಾಷ್ಟ್ರಮಟ್ಟದಲ್ಲೂ ನಮ್ಮ ಕರ್ಯಕ್ರಮ ಜಾರಿ:** ಕೇಂದ್ರದಲ್ಲಿ ಈ ಬಾರಿ ಬಿಜೆಪಿ ಅಧಿಕಾರಕ್ಕೆ ಬರುವ ಸಾಧ್ಯತೆಗಳು ಕಡಿಮೆ ಇದೆ. ನಾವು ಅಧಿಕಾರಕ್ಕೆ ಬಂದರೆ ನಾವು ರಾಜ್ಯದಲ್ಲಿ ತಂದಿರುವ ದಲಿತ ಮತ್ತು ಹಿಂದುಳಿದ ರ್ಗಗಳ ಪರವಾದ ಕಾನೂನುಗಳನ್ನು ರಾಷ್ಟ್ರಮಟ್ಟದಲ್ಲೂ ಜಾರಿಗೆ ತರಲಾಗುವುದು. ಈ ಬಗ್ಗೆ ರಾಹುಲ್ ಗಾಂಧಿ ಅವರ ಜತೆಗೂ ಮಾತಾಡಿ ಪ್ರಣಾಳಿಕೆಯಲ್ಲಿ ಸೇರಿಸಲು ಹೇಳಿದ್ದೇನೆ ಎಂದರು.

## ಫಾಸ್ಟ್ ನ್ಯೂಸ್

### ವಸತಿ ಶಾಲೆ ಫಲಿತಾಂಶ ಪ್ರಕಟ

» ಬೆಂಗಳೂರು

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವ್ಯಾಪ್ತಿಯ ಮೊರಾರ್ಜಿ, ಕಿತ್ತೂರು ರಾಣಿ ಚೆನ್ನಮ್ಮ ಸೇರಿದಂತೆ ಇತರ ವಸತಿ ಶಾಲೆಗಳ 6ನೇ ತರಗತಿಗೆ ಪ್ರವೇಶ ಕಲ್ಪಿಸುವ ಸಲುವಾಗಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರ ನಡೆಸಿದ್ದ ಲಿಖಿತ ಪರೀಕ್ಷೆಯ ಫಲಿತಾಂಶವನ್ನು ಪ್ರಕಟಿಸಲಾಗಿದೆ. ಪರೀಕ್ಷೆ ತೆಗೆದುಕೊಂಡಿದ್ದ 1,98,672 ವಿದ್ಯಾರ್ಥಿಗಳ ಜಿಲ್ಲಾವಾರು ರಾಂಕ್ ಪಟ್ಟಿಯನ್ನು ವೆಬ್ ಸೈಟ್ ನಲ್ಲಿ ಪ್ರಕಟಿಸಲಾಗಿದೆ ಎಂದು ಕೆಇಎ ಕಾರ್ಯನಿರ್ವಾಹಕ ನಿರ್ದೇಶಕಿ ಎಸ್.ರಮ್ಯಾ ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದ್ದಾರೆ.

**ರಿಸಲ್ಟ್ ಚೆಕ್ ಮಾಡಲು:** ಸಮಾಜ ಕಲ್ಯಾಣ ಇಲಾಖೆ ಸೀಟ್ ಮೆಟ್ರಿಕ್ಸ್ ವಿವರಗಳನ್ನು ಸಲ್ಲಿಸಿದ ನಂತರ ವಸತಿ ಶಾಲೆವಾರು ಸೀಟು ಹಂಚಿಕೆ ಪ್ರಕ್ರಿಯೆಯನ್ನು ಮಾಡಲಾಗುವುದು ಎಂದು ರಮ್ಯಾ ಅವರು ತಿಳಿಸಿದ್ದಾರೆ.

### ಸಿಇಟಿ ಅಭ್ಯರ್ಥಿಗಳು ಹೆಚ್ಚುವರಿ ಶುಲ್ಕ ವಾಪಸ್ ಪಡೆಯಲು ಕೊನೆ ಅವಕಾಶ

» ಬೆಂಗಳೂರು

ಇಂಜಿನಿಯರಿಂಗ್, ವೈದ್ಯಕೀಯ ಸೇರಿದಂತೆ ವಿವಿಧ ವೃತ್ತಿಪರ ಕೋರ್ಸ್ ಗಳ ಪ್ರವೇಶ ಸಂದರ್ಭದಲ್ಲಿ ಪಾವತಿಸಿದ್ದ ಹೆಚ್ಚುವರಿ ಶುಲ್ಕವನ್ನು ವಾಪಸ್ ಪಡೆಯದ 2022, 2023ನೇ ಸಾಲಿನ ಸಿಇಟಿ ಅಭ್ಯರ್ಥಿಗಳಿಗೆ ತಮ್ಮ ಹಣ ವಾಪಸ್ ಪಡೆದುಕೊಳ್ಳಲು ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಕೊನೆಯ ಅವಕಾಶ ಕಲ್ಪಿಸಿದೆ. ಇದುವರೆಗೆ ಹಣ ಮರುಪಾವತಿಯಾಗದ ಅಭ್ಯರ್ಥಿಗಳು ಏಪ್ರಿಲ್ 10ರೊಳಗೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವೆಬ್ಸೈಟ್ https://kea.kar.nic.inಮೂಲಕ ತಮ್ಮ ಬ್ಯಾಂಕ್ ಖಾತೆಯ ಮಾಹಿತಿಯನ್ನು ಸಲ್ಲಿಸಬೇಕಿದೆ. ಬ್ಯಾಂಕ್ ಖಾತೆಯ ಮಾಹಿತಿಯನ್ನು ಸರಿಯಾಗಿ ನಮೂದಿಸದೆ ಇರುವ ಅಭ್ಯರ್ಥಿಗಳ ಪಟ್ಟಿಯನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವೆಬ್ಸೈಟ್ ನಲ್ಲಿ ಈಗಾಗಲೇ ಪ್ರಕಟಿಸಲಾಗಿದೆ. ಇನ್ನು ಅನೇಕರು ತಮ್ಮ ಬ್ಯಾಂಕ್ ಖಾತೆಗಳ ಮಾಹಿತಿ ನೀಡಿಲ್ಲ. ಅಂತಹ ಅಭ್ಯರ್ಥಿಗಳು ತಮ್ಮ ಯೂಸರ್ ಐಡಿ, ಪಾಸ್ವರ್ಡ್ ದಾಖಲಿಸಿ ತಮ್ಮ ಬ್ಯಾಂಕ್ ಖಾತೆಗಳ ವಿವರಗಳನ್ನು ಅಪ್ಲೋಡ್ ಮಾಡುವಂತೆ ತಿಳಿಸಲಾಗಿದೆ.

### ಸಿಮೆಂಟ್ ಬೆಲೆ ಪ್ರತಿ ಚೀಲಕ್ಕೆ 10-15 ರೂ ಹೆಚ್ಚಳ

» ನವದೆಹಲಿ

ಸಿಮೆಂಟ್ ಕಂಪನಿಗಳು ದೇಶಾದ್ಯಂತ ಪ್ರತಿ ಚೀಲಕ್ಕೆ ಸರಾಸರಿ 10–15 ರೂ.ಗಳ ಬೆಲೆ ಏರಿಕೆಯನ್ನು ತೆಗೆದುಕೊಂಡಿವೆ ಎಂದು ವರದಿಗಳು ಸೂಚಿಸಿದ್ದರಿಂದ ಸಿಮೆಂಟ್ ಷೇರುಗಳು ಏಪ್ರಿಲ್ 2 ರಂದು ಲಾಭ ಗಳಿಸಿದವು. ಅಲ್ಟ್ರಾಟೆಕ್ ಸಿಮೆಂಟ್, ಶ್ರೀ ಸಿಮೆಂಟ್ಸ್, ಅಂಬುಜಾ ಸಿಮೆಂಟ್ಸ್, ಎಸಿಸಿ ಮತ್ತು ದಾಲ್ಮಿಯಾ ಭಾರತ್ ಷೇರುಗಳು ಶೇಕಡಾ 1 ರಿಂದ 3 ರಷ್ಟು ಲಾಭದೊಂದಿಗೆ ವಹಿವಾಟು ಮುಕ್ತಾಯಗೊಳಿಸಿವೆ. ವಿವಿಧ ಪ್ರದೇಶಗಳಲ್ಲಿನ ಸಿಮೆಂಟ್ ಕಂಪನಿಗಳು ಉತ್ತರದಲ್ಲಿ ಪ್ರತಿ ಚೀಲಕ್ಕೆ 10–15 ರೂ.ಗಳಿಂದ ಮಧ್ಯ ಮತ್ತು ಪೂರ್ವದಲ್ಲಿ ಪ್ರತಿ ಚೀಲಕ್ಕೆ 40 ರೂ.ಗಳವರೆಗೆ ಬೆಲೆ ಏರಿಕೆಯನ್ನು ಘೋಷಿಸಿವೆ. ಆದಾಗ್ಯೂ, ಡೀಲರ್ ಗಳು ಹೆಚ್ಚಳವು ಪ್ರತಿ ಚೀಲಕ್ಕೆ 10–20 ರೂ.ಗಳಲ್ಲಿ ಉಳಿಯುತ್ತದೆ ಎಂದು ನಿರೀಕ್ಷಿಸುತ್ತಾರೆ. ಪಶ್ಚಿಮದಲ್ಲಿ, ಕಂಪನಿಗಳು ಪ್ರತಿ ಚೀಲಕ್ಕೆ 20 ರೂ.ಗಳ ಹೆಚ್ಚಳವನ್ನು ಘೋಷಿಸಿವೆ. ಮಾರ್ಚ್‌ನಲ್ಲಿ ದಾಸ್ತಾನು, ಹೋಳಿ ಮತ್ತು ಲೋಕಸಭಾ ಚುನಾವಣೆಗಳಿಂದಾಗಿ ಕಾರ್ಮಿಕರ ಕೊರತೆಯಂತಹ ಅಂಶಗಳು ಏಪ್ರಿಲ್‌ನಲ್ಲಿ ಸಿಮೆಂಟ್ ಬೇಡಿಕೆಯ ಮೇಲೆ ಪರಿಣಾಮ ಬೀರಬಹುದು. ಘೋಷಿತ ಬೆಲೆ ಏರಿಕೆಯು

## ಫಾಸ್ಟ್ ನ್ಯೂಸ್

### ನಾಳೆಯೇ ದ್ವಿತೀಯ ಪಿಯುಸಿ ರಿಸಲ್ಟ್

» **ಬೆಂಗಳೂರು**

ನಾಳೆಯೇ ದ್ವಿತೀಯ ಪಿಯುಸಿ ರಿಸಲ್ಟ್ ಪ್ರಕಟವಾಗಲಿದೆ ಎನ್ನುವ ಪ್ರತಿಯೊಂದು ಸಾಮಾಜಿಕ ಜಾಲ ತಾಣಗಳಲ್ಲಿ ವೈರಲ್ ಆಗಿದೆ. ಇದೇ ವೇಳೆ ವೈರಲ್ ಆಗಿರೋ ಪತ್ರಕ್ಕೆ ಸಂಬಂಧ ಪಟ್ಟಂತೆ ನಿಮ್ಮ ಕನ್ನಡ ನ್ಯೂಸ್ ನೌ ದ್ವಿತೀಯ ಪಿಯುಸಿ ಆಯುಕ್ತರನ್ನು ಸಂಪರ್ಕ ಮಾಡಿದ ವೇಳೆಯಲ್ಲಿ ಇದೊಂದು ನಕಲಿ ಸುತ್ತೋಲೆ ಅಂತ ಹೇಳಿದ್ದಾರೆ. ಈ ಮೂಲಕ ಶಿಕ್ಷಣ ಇಲಾಖೆಯಿಂದ ದ್ವಿತೀಯ ಪಿಯುಸಿ ರಿಸಲ್ಟ್ ಬಗ್ಗೆ ಅಧಿಕ ಆದೇಶ ಹೊರ ಬಿದ್ದಿಲ್ಲ ಎನ್ನುವುದು ಸ್ಪಷ್ಟವಾಗಿದೆ. ವಿದ್ಯಾರ್ಥಿಗಳು ಸುಳ್ಳು ಸುದ್ದಿಗಳಿಗೆ ಕಿವಿಗೊಡದೆ ಇರಬೇಕು ಎನ್ನುವುದು ಕನ್ನಡ ನ್ಯೂಸ್ ನೌ ನ ಆಶಯವಾಗಿದೆ. ನಾವೂ ಕೂಡ ಅಧಿಕೃತ ಮಾಹಿತಿಯನ್ನು ಸಂಬಂಧ ಪಟ್ಟ ಅಧಿಕಾರಿಗಳು ನೀಡಿದ ಬಳಿಕ ಮಾತ್ರ ಅದನ್ನು ಓದುಗರಿಗೆ ನೀಡುತ್ತೇವೆ ಹೊರತು, ಆತುರದಲ್ಲಿ ಸುದ್ದಿ ಮಾಡೋದು ಇಲ್ಲ ಸದ್ಯಕ್ಕೆ ಲಭ್ಯವಿರುವ ಮಾಹಿತಿ ಪ್ರಕಾರ ದ್ವಿತೀಯ ಪಿಯುಸಿ ರಿಸಲ್ಟ್ ಇನ್ನೂ ಹತ್ತಿರಿಂದ 15 ದಿವಸದಲ್ಲಿ ಬರುವ ಸಾಧ್ಯತೆ ಇದೇ ಎನ್ನಲಾಗುತ್ತಿದೆ, ಅದ್ಯಾಗು ಕೂಡ ಆಯುಕ್ತರೆ ಮಾಧ್ಯಮಗಳಿಗೆ ಮಾಹಿತಿ ನೀಡುತ್ತಾರೆ.

**ನಕಲಿ ಸುತ್ತೋಲೆಯಲ್ಲಿ ಇರೋದು ಏನು?:** ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಲಿ, ಮಲ್ಲೇಶ್ವರಂ, ಬೆಂಗಳೂರು 11 ಅಅಜ:/4/2024 ಪತ್ರಿಕಾ ಪ್ರಕಟಣೆ ಮಾರ್ಚ್ 20230 ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಯನ್ನು ದಿನಾಂಕ:11/03/2014ರಿಂದ21/03/2024ರವರೆಗೆ ನಡೆಸಲಾಯಿತು. ಎಲ್ಲಾ ವಿಷಯಗಳ ಉತ್ತರ ಪತ್ರಿಕೆಗಳ ಮೌಲ್ಯವಾದನ ಕಾರ್ಯವು ಮುಕ್ತಾಯವಾಗಿದೆ. ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಯ ಫಲಿತಾಂಶ ಪ್ರಕಟಿಸುವ ಸಂಬಂಧ ದಿನಾಂಕ: (M11/2121 ರಂದು ಬೆಳಿಗ್ಗೆ 11:00 ಗಂಟೆಗೆ ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಲಿಯಲ್ಲಿ ಸುದ್ದಿಗೋಷ್ಠಿಯನ್ನು ಕರೆಯಲಾಗಿದೆ. ಫಲಿತಾಂಶವನ್ನು https://karresults.nic.in ಜಾಲತಾಣದಲ್ಲಿ ಆಔ 03/04/20248 ವೀಕ್ಷಿಸಬಹುದಾಗಿದೆ.

### ಪೋಷಕರ ಗಮನಕ್ಕೆ : RTE ಅಡಿ ಶಾಲೆಗಳ ಪ್ರವೇಶಾತಿಗೆ ಅವಧಿ ವಿಸ್ತರಣೆ

» **ಬೆಂಗಳೂರು**

ಶಿಕ್ಷಣ ಹಕ್ಕು ಕಾಯ್ದೆ(ಖಖಇ) ಅಡಿ ಅರ್ಜಿ ಸಲ್ಲಿಸಲು ಮೇ 20ರವರೆಗೆ ಅವಕಾಶ ಕಲ್ಪಿಸಲಾಗಿದ್ದು, ಆಸಕ್ತರು ಮೇ.20 ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ. ಈ ಬಗ್ಗೆ ಶಿಕ್ಷಣ ಇಲಾಖೆ ಸುತ್ತೋಲೆ ಹೊರಡಿಸಿದೆ. 2024–25ನೇ ಸಾಲಿನಲ್ಲಿ ಶಿಕ್ಷಣ ಹಕ್ಕು ಕಾಯಿದೆ ಸೆಕ್ಷನ್ 12(1)(ಬಿ) ಮತ್ತು 12(1)(ಸಿ) ಅಡಿ ಪ್ರವೇಶ ಪ್ರಕ್ರಿಯೆ ನಡೆಸಲು ಉಲ್ಲೇಖ–03ರ ಸುತ್ತೋಲೆಯನ್ವಯ ಕ್ರಮವಹಿಸಲಾಗಿದೆ. ಕಾರ್ಯಸೂಚಿಯನ್ವಯ ಆರ್.ಟಿ.ಇ ಅಡಿ ದಾಖಲಾತಿಗೆ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕವಾಗಿ 22.04.2024 ಎಂದು ನಿಗದಿಪಡಿಸಲಾಗಿತ್ತು. ಉಪನಿರ್ದೇಶಕರುಗಳಿಂದ ಸ್ವೀಕೃತಗೊಂಡ ಮನವಿಗಳ ಮೇರೆಗೆ ಅರ್ಜಿ ಸಲ್ಲಿಸುವ ಅವಧಿಯ ದಿನಾಂಕವನ್ನು 20.05.2024ರವರೆಗೆ ವಿಸ್ತರಿಸಲಾಗಿದೆ ಹಾಗೂ ಪರಿಷ್ಕೃತ ವೇಳಾಪಟ್ಟಿಯನ್ನು ಲಗತ್ತಿಸಿದೆ. ಶೇ.25 ರಷ್ಟು ಸೀಟುಗಳು ಉಚಿತ ಪ್ರವೇಶಕ್ಕೆ ಲಭ್ಯವಿರುವ ಶಾಲೆಗಳಲ್ಲಿ ಪ್ರವೇಶಕ್ಕೆ ಅರ್ಜಿ ಸಲ್ಲಿಸಲು ನಿಗದಿಪಡಿಸಿದ್ದ ಕಾಲಾವಕಾಶವನ್ನು ಶಿಕ್ಷಣ ಇಲಾಖೆ ಸುಮಾರು ಒಂದು ತಿಂಗಳು ವಿಸ್ತರಿಸಿದೆ. ಆರ್ಟಿಇ ಸೀಟಿಗೆ ಅರ್ಜಿ ಸಲ್ಲಿಸಲು ಈ ಮೊದಲು ಏ.22ರವರೆಗೆ ಕಾಲಾವಕಾಶ ನೀಡಲಾಗಿತ್ತು. ಇದೀಗ ಈ ಅವಧಿಯನ್ನು 20ರವರೆಗೆ ವಿಸ್ತರಿಸಲಾಗಿದೆ.

### ಶೇ. 20ರಷ್ಟು ದರ ಹೆಚ್ಚಳವಾದ್ರೂ ಚುನಾವಣೆ ಪ್ರಚಾರಕ್ಕೆ ಬಹುತೇಕ ಹೆಲಿಕಾಪ್ಟರ್ ಬುಕ್

» **ಬೆಂಗಳೂರು**

ಲೋಕಸಭೆ ಚುನಾವಣೆ ಪ್ರಚಾರಕ್ಕೆ ನಾಯಕರ ಓಡಾಟಕ್ಕಾಗಿ ಬಹುತೇಕ ಹೆಲಿಕಾಪ್ಟರ್ ಗಳು ಬುಕ್ ಆಗಿವೆ. ರಾಜಕೀಯ ಪಕ್ಷಗಳ ಪ್ರಚಾರದ ಭರಾಟೆ ರಂಗೇರುತ್ತಿದ್ದಂತೆ ವಿವಿಧೆಡೆ ಪ್ರಚಾರಕ್ಕೆ ತೆರಳಲು ಸಮಯ ಅಭಾವದ ಕಾರಣ ಹೆಲಿಕಾಪ್ಟರ್ ಮತ್ತು ಸಣ್ಣ ವಿಮಾನಗಳನ್ನು ಪಕ್ಷಗಳು ಕಾಯ್ದಿರಿಸಿವೆ. ದಕ್ಷಿಣ ಭಾರತದ ಹೆಲಿಕಾಪ್ಟರ್ ಕಂಪನಿಗಳ ಬಹುತೇಕ ಹೆಲಿಕಾಪ್ಟರ್ ಗಳು, ಜೆಟ್ ಗಳನ್ನು ಬುಕ್ ಮಾಡಲಾಗಿದೆ. ಕಳೆದ ಲೋಕಸಭಾ ಚುನಾವಣೆಗೆ ಹೋಲಿಸಿದರೆ ಈ ಬಾರಿ ಶೇಕಡ 20ರಷ್ಟು ದರ ಹೆಚ್ಚಳವಾಗಿದೆ. ಮುಂದಿನ ಒಂದೂವರೆ ತಿಂಗಳಿಗೆ ಖಾಸಗಿ ಏವಿಯೇಷನ್ ಸಂಸ್ಥೆಗಳಿಗೆ ಬಾರಿ ಬೇಡಿಕೆ ಬಂದಿದ್ದು, ಹೆಲಿ ಟೂರಿಸಂ, ಖಾಸಗಿ ಸೇರಿ ಇತರೆ ಉದ್ದೇಶಗಳಿಗಾಗಿರುವ ಹೆಲಿಕಾಪ್ಟರ್, ಪ್ರೈವೇಟ್ ಜೆಟ್ ಗಳನ್ನು ಬಳಕೆ ಮಾಡಿಕೊಳ್ಳಲಾಗುವುದು. 100ಕ್ಕೂ ಅಧಿಕ ಹೆಲಿಕಾಪ್ಟರ್ ಗಳು ಮತ್ತು ಸಣ್ಣ ವಿಮಾನಗಳು ಬುಕ್ ಆಗಿವೆ. ಬೆಂಗಳೂರು ಮಾತ್ರವಲ್ಲದೇ ವಿವಿಧೆಡೆಯೂ ಹೆಲಿಕಾಪ್ಟರ್ ಗಳನ್ನು ಕಾಯ್ದಿರಿಸಲಾಗಿದೆ. 2 ಆಸನದ ಹೆಲಿಕಾಪ್ಟರ್ ಗೆ ಒಂದು ಗಂಟೆಗೆ 2.10 ಲಕ್ಷ ರೂ., 4 ಸೀಟಿನ ಹೆಲಿಕಾಪ್ಟರ್ ಗೆ ಗಂಟೆಗೆ 2.30 ಲಕ್ಷ ರೂ., 6 ಸೀಟಿನ ಮಿನಿ ವಿಮಾನಕ್ಕೆ ಗಂಟೆಗೆ 2.60 ಲಕ್ಷ ರೂ., 8 ಸೀಟಿನ ಮಿನಿ ವಿಮಾನಕ್ಕೆ ಗಂಟೆಗೆ 3.50 ಲಕ್ಷ ರೂ., 13 ಸೀಟಿನ ಮಿನಿ ವಿಮಾನಕ್ಕೆ ಗಂಟೆಗೆ 4 ಲಕ್ಷ ಬಾಡಿಗೆ ಇದೆ.

### ಪೊಲೀಸ್ ಧ್ವಜ ದಿನಾಚರಣೆ – ನಿವೃತ್ತ ಎ.ಆರ್.ಎಸ್.ಐ ರವಿಕುಮಾರ್ ಸಲಹೆ

# ಪೊಲೀಸರು ಭಯ ಮುಕ್ತರಾಗಿ ಕೆಲಸ ನಿರ್ವಹಿಸಿ

» **ಚಿತ್ರದುರ್ಗ**

ಪೊಲೀಸರು ಭಯ ಹಾಗೂ ಒತ್ತಡಗಳಿಂದ ಮುಕ್ತರಾಗಿ ಕೆಲಸ ನಿರ್ವಹಿಸಬೇಕು. ಕೆಲಸಕ್ಕೆ ಸೇರುವ ಆರಂಭದಲ್ಲಿ ಇದ್ದ ಆರೋಗ್ಯವನ್ನು ಕಾಪಾಡಿಕೊಂಡು ಸೇವೆ ಸಲ್ಲಿಸಿ ಲವಲವಿಕೆಯಿಂದ ನಿವೃತ್ತಿ ಹೊಂದಬೇಕು ಎಂದು ನಿವೃತ್ತ ಎ.ಆರ್.ಎಸ್.ಐ ರವಿಕುಮಾರ್.ಆರ್.ಟಿ ಸಲಹೆ ನೀಡಿದರು.

ನಗರದ ಡಿ.ಎ.ಆರ್. ಪೊಲೀಸ್ ಕವಾಯತು ಮೈದಾನದಲ್ಲಿ ಮಂಗಳವಾರ ಆಯೋಜಿಸಲಾಗಿದ್ದ ಪೊಲೀಸ್ ಧ್ವಜ ದಿನಾಚರಣೆ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಸಿ ಅವರು ಮಾತನಾಡಿದರು.

1991 ರಲ್ಲಿ ಪೊಲೀಸ್ ಇಲಾಖೆಗೆ ಸೇವೆಗೆ ಸೇರಿದಾಗಿನಿಂದಲೂ ಸದಾಕಲಾ ಕರ್ತವ್ಯಕ್ಕೆ ಬದ್ಧನಾಗಿದ್ದೇನೆ. 39 ವರ್ಷಗಳ ಕಾಲ ಸೇವೆ ಸಲ್ಲಿಸಿದ್ದೇನೆ. ಪೊಲೀಸರು ಕರ್ತವ್ಯದ ಜೊತೆಗೆ ಆರೋಗ್ಯ ಮತ್ತು ಕುಟುಂಬದ ಬಗ್ಗೆಯೂ ಕಾಳಜಿ ವಹಿಸಬೇಕು. ಕರ್ತವ್ಯಕ್ಕೆ ಸೇರುವಾಗ ಇದ್ದ ಲವಲವಿಕೆಯನ್ನು ಕಾಪಾಡಿಕೊಂಡು ಕೆಲಸ ನಿರ್ವಹಿಸಿ ಸಂತಸದಿಂದ ನಿವೃತ್ತರಾಗಬೇಕು ಎಂದರು.

ಇಲಾಖೆ ಸಿಬ್ಬಂದಿಗಾಗಿ ಅನೇಕ ಆರೋಗ್ಯ ಸೌಲಭ್ಯಗಳನ್ನು ನೀಡಿದೆ. ಇವುಗಳನ್ನು ಸದುಪಯೋಗ ಪಡಿಸಿಕೊಳ್ಳಬೇಕು. 2023–24 ರಲ್ಲಿ ನನ್ನನ್ನು ಸೇರಿ 28ಕ್ಕೂ ಹೆಚ್ಚಿನ ಪೊಲೀಸ್ ಸಿಬ್ಬಂದಿ ನಿವೃತ್ತರಾಗಿದ್ದಾರೆ. ಇವರಲ್ಲರನ್ನು ಕರೆದು ಇಂದು ಸನ್ಮಾಸಿಸಿರುವುದು ಸಂತಸ ತಂದಿದೆ. ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಯಾಗಿ ಆಹ್ವಾನಿಸಿರುವುದಕ್ಕೆ ನಾನು ಚಿರಋಣಿಯಾಗಿದ್ದೇನೆ ಎಂದು ಹೇಳಿದರು.





ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಧರ್ಮೇಂದ್ರ ಕುಮಾರ್ ಮೀನಾ, ವಾರ್ಷಿಕ ವರದಿ ವಾಚನ ಮಾಡಿ, ನಿವೃತ್ತ ಪೊಲೀಸ್ ಸಿಬ್ಬಂದಿ ಕಲ್ಯಾಣಕ್ಕಾಗಿ ಅನೇಕ ಕಾರ್ಯಕ್ರಮ ರೂಪಿಸಲಾಗಿದೆ. ಪೊಲೀಸ್ ಆರೋಗ್ಯ ಭಾಗ್ಯ ಯೋಜನೆಯನ್ನು ನಿವೃತ್ತಿ ಸಿಬ್ಬಂದಿಗೆ ವಿಸ್ತರಿಸಲಾಗಿದೆ. ಜಿಲ್ಲೆಯಲ್ಲಿ ಈ ಯೋಜನೆಯಡಿ 550 ನಿವೃತ್ತ ಪೊಲೀಸ್ ಸಿಬ್ಬಂದಿ ನೊಂದಣಿಯಾಗಿದ್ದಾರೆ ಎಂದರು.

ಕಳೆದ ವರ್ಷದಲ್ಲಿ 23 ನಿವೃತ್ತ ಸಿಬ್ಬಂದಿಗೆ ಆರೋಗ್ಯ ಭಾಗ್ಯ ಯೋಜನೆಯಡಿ ಪಾವತಿಯಾಗದಚಿಕಿತ್ಸೆಗಳಿಗಾಗಿಪೊಲೀಸ್ ಕಲ್ಯಾಣ ನಿಧಿಯಿಂದ ರೂ. 2.32 ಲಕ್ಷ ಪಾವತಿಸಲಾಗಿದೆ. ಶವ ಸಂಸ್ಕಾರಕ್ಕಾಗಿ ರೂ.1.20 ಲಕ್ಷ ನೀಡಲಾಗಿದೆ. ಶೈಕ್ಷಣಿಕ ಯೋಜನೆಯಡಿ 111 ವಿದ್ಯಾರ್ಥಿಗಳಿಗೆ ಉನ್ನತವಿದ್ಯಾಭ್ಯಾಸಕ್ಕಾಗಿರೂ.14ಲಕ್ಷನೆರವು ನೀಡಲಾಗಿದೆ . ಕಣ್ಣಿನ ದೋಷ ಇರುವ ಸಿಬ್ಬಂದಿಗಳ ಕನ್ನಡಕ ಖರೀದಿಗಾಗಿ ರೂ.36 ಸಾವಿರ ನೀಡಲಾಗಿದೆ. ಇದರೊಂದಿಗೆ ಜಿಲ್ಲೆಯಲ್ಲಿ ಪೊಲೀಸ್ ಕ್ಯಾಂಟಿನ್, ಪ್ರಾವಿಜನ್ ಸ್ಟೋರ್,ಮೆಡಿಕಲ್ ಸ್ಟೋರ್ ತೆರಯಲಾಗಿದೆ ಎಂದು ತಿಳಿಸಿದರು. ಹೆಚ್ಚು ತೂಕ ಹಾಗೂ ಬೊಜ್ಜಿನ ಸಮಸ್ಯೆಯಿಂದ ಬಳಲುತ್ತಿರುವ ಕರ್ತವ್ಯನಿರತ ಪೊಲೀಸ್ ಸಿಬ್ಬಂದಿಯ ದೈಹಿಕ ಕ್ಷಮತೆ ಹೆಚ್ಚಿಸಿ, ಉತ್ತಮ ಸ್ಥಿತಿಯಲ್ಲಿ ಇಡಲು ಇಸ್ರೇಲ್ ಮೂಲದ ಖಾಸಗಿ (ಹೈಗೇರ್)ಕಂಪನಿ ಸಹಯೋಗದಲ್ಲಿ ಪ್ರಥಮ ಬಾರಿಗೆ 130 ಸಿಬ್ಬಂದಿಗೆ ಸ್ಮಾರ್ಟ್ ವಾಚ್, ಎಲೆಸ್ಟಿಕ್ ಬ್ಯಾಂಡ್ ನೀಡಲಾಗುತ್ತಿದೆ. ಈ ಮೂಲಕ ಸಿಬ್ಬಂದಿಯ ದೈಹಿಕ ಅಂಶಗಳನ್ನು ಮೇಲ್ವಿಚಾರಣೆ ಮಾಡಲಾಗುವುದು. ಮೂರು ತಿಂಗಳಲ್ಲಿ ಸಿಬ್ಬಂದಿ ಮರಳಿ ದೈಹಿಕ ಕ್ಷಮತೆ ಗಳಿಸುವ ಗುರಿ ಹೊಂದಲಾಗಿದೆ ಎಂದು ತಿಳಿಸಿದರು.ಪೊಲೀಸ್ ಧ್ವಜದ ಸ್ಟಿಕರ್‌ಗಳನ್ನು ಬಿಡುಗಡೆಗೊಳಿಸಲಾಯಿತು. ಧ್ವಜ ದಿನಾಚರಣೆ ಅಂಗವಾಗಿ 6 ಪೊಲೀಸ್ ತಂಡಗಳು ನಿಧಾನ ಹಾಗೂ ತೀವ್ರಗತಿಯ ಪಥಸಂಚಲನ ನೆಡಿಸಿದವು. ಸಶಸ್ತ್ರ ಮೀಸಲು ಪಡೆಯ ಪಿ.ಎಸ್.ಐ ಯುವರಾಜ್.ಎಸ್.ಎಸ್. ಪಥ ಸಂಚಲನದ ನೇತೃತ್ವ ವಹಿಸಿದ್ದರು. ಕಾರ್ಯಕ್ರಮದಲ್ಲಿ ನಿವೃತ್ತ ಪೊಲೀಸರನ್ನು ಸನ್ಮಾನಿಸಲಾಯಿತು.

ಜಿಲ್ಲಾಧಿಕಾರಿ ಟಿ.ವೆಂಕಟೇಶ್, ನಿವೃತ್ತ ಪೊಲೀಸ್ ಡಿ.ಐ.ಜಿ ಎಂ.ಎನ್.ನಾಗರಾಜ್, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಎಸ್. ಜೆ.ಕುಮಾರಸ್ವಾಮಿ, ಐಮಂಗಲ ಪೊಲೀಸ್ ತರಬೇತಿ ಕೇಂದ್ರ ಪ್ರಾಂಶುಪಾಲರ ಪಾಪಣ್ಣ ಸೇರಿದಂತೆ ಮತ್ತಿತರು ಉಪಸ್ಥಿತರಿದ್ದರು.

#### ಪೊಲೀಸ್ ಧ್ವಜ ಹಾಗೂ ಕಲ್ಯಾಣದಿನ ಇತಿಹಾಸ

ಪೊಲೀಸ್ ಸಿಬ್ಬಂದಿಗಳ ಕಲ್ಯಾಣ ಕಾರ್ಯಕ್ರಮ ಹಾಗೂ ಪೊಲೀಸರ ಸೇವೆ,ತ್ಯಾಗ,ಬಲಿದಾನಗಳ ಸ್ಮರಣಾರ್ಥವಾಗಿ ಪೊಲೀಸ್ ಧ್ವಜ ಹಾಗೂ ಕಲ್ಯಾಣ ದಿನಾಚರಣೆ ಆಚರಿಸಲಾಗುತ್ತದೆ. 1984ರ ಮೊದಲು ನವೆಂಬರ್ 2 ರಂದು ಪೊಲೀಸ್ ಕಲ್ಯಾಣದಿನ ಹಾಗೂ ಏಪ್ರಿಲ್ 2 ಪೊಲೀಸ್ ಧ್ವಜ ದಿನಾಚರಣೆ ಪ್ರತ್ಯೇಕವಾಗಿ ಆಚರಿಸಲಾಗುತ್ತಿತ್ತು. 1984 ರಿಂದ ಪ್ರತಿ ವರ್ಷ ಏಪ್ರಿಲ್ 2 ತಾರೀಖಿನಿಂದು ಪೊಲೀಸ್ ಧ್ವಜ ಹಾಗೂ ಪೊಲೀಸ್ ಕಲ್ಯಾಣ ದಿನಾಚರಣೆಯನ್ನು ಒಟ್ಟಾಗಿ ಆಚರಿಸಲಾಗುತ್ತಿದೆ.

### ಸಹಾಯಕ ಚುನಾವಣಾ ಅಧಿಕಾರಿ ಮಹೇಂದ್ರ ಕುಮಾರ್ ಎಚ್ಚರಿಕೆ

# ಮತ ಹಾಕದಂತೆ ಧಮ್ಕಿ ಹಾಕಿದರೆ, ಕಾನೂನು ಕ್ರಮ

» **ಹೊಸದುರ್ಗ**

ಚುನಾವಣೆಯಲ್ಲಿ ನಮ್ಮ ಪಕ್ಷದ ಅಭ್ಯರ್ಥಿಗೆ ಮತ ಹಾಕಿ ಎಂದು ಯಾರಾದರೂ ನಿಮಗೆ ಒತ್ತಡ ಅಥವಾ ಧಮ್ಕಿ ಹಾಕಿದರೆ, ಇಲ್ಲವೇ ಮತ ಹಾಕದಂತೆ ಭಯ ಹುಟ್ಟಿಸಿದರೆ, ನಿರ್ಭಿತಿಯಿಂದ ನಮಗೆ ಅಂತವರ ಮಾಹಿತಿ ನೀಡಿ. ಅವರ ವಿರುದ್ಧ ಕಾನೂನು ಕ್ರಮ ತೆಗೆದುಕೊಳ್ಳಲಾಗುವುದು ಎಂದು ಸಹಾಯಕ ಚುನಾವಣಾ ಅಧಿಕಾರಿ ಮಹೇಂದ್ರ ಕುಮಾರ್ ಹೇಳಿದರು.

ತಾಲೂಕಿನಮಾಡದಕೆರೆಹೋಬಳಿಯಲಕ್ಕಿಹಳ್ಳಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲಾ ಆವರಣದಲ್ಲಿ ಮಂಗಳವಾರ ಆಯೋಜಿಸಿದ್ದ ಮತದಾನ ಜಾಗೃತಿ ಕಾರ್ಯಕ್ರಮದ ನೇತೃತ್ವವಹಿಸಿ ಅವರು ಮಾತನಾಡಿದರು.

ಲಕ್ಕಿಹಳ್ಳಿ ಗ್ರಾಮದಲ್ಲಿ ಕಳೆದ ವಿಧಾನಸಭಾ ಕ್ಷೇತ್ರದ ಚುನಾವಣೆಯಲ್ಲಿ ಶೇ.65ರಷ್ಟು ಮಾತ್ರ ಮತದಾನ ಮಾಡಲಾಗಿದೆ. ಇನ್ನುಳಿದ 35.ರಷ್ಟು ಮತದಾರರು ಮತದಾನ ಮಾಡದಿರಲು ಕಾರಣವೇನು? ಮತದಾನ ಮಾಡಲು ನಿಮಗೇನಾದರೂ ಸಮಸ್ಯೆ ಇದೆಯೇ? ಮತದಾನ ಮಾಡದಂತೆ ಯಾರದ್ದಾದರೂ ಒತ್ತಡ ಮತ್ತು ಭಯವಿದೆಯೇ? ಹಾಗೇನಾದರೂ ಇದ್ದರೆ, ಯಾವುದೇ ಭಯವಿಲ್ಲದೇ ನಮಗೆ ಮಾಹಿತಿ ನೀಡಿ. ಅಂಥವರ ಮೇಲೆ ಸೂಕ್ತ ಕಾನೂನು ಕ್ರಮ ಜರುಗಿಸಲಾಗುವುದು. 85 ವರ್ಷ ಮೇಲ್ಪಟ್ಟವರು ಮತ್ತು ವಿಕಲಚೇತನರಿಗೆ ಅವರ ಮನೆಗಳಲ್ಲಿಯೇ ಮತದಾನ ಮಾಡಲು ಅವಕಾಶ ಕಲ್ಪಿಸಲಾಗಿದೆ. ಉದ್ಯೋಗ ಹರಸಿಕೊಂಡು ನಗರಗಳತ್ತ ತೆರಳಿರುವ ಮತದಾರರನ್ನು ಕರೆಸಿಕೊಂಡು ಮತದಾನ ಮಾಡಿಸಿ. ಮತದಾನದ ದಿನದಂದು ನಿರ್ಭಿತಿಯಾಗಿ ಮತದಾನ ಮಾಡುವಂತಹ ಅವಕಾಶ ಕಲ್ಪಿಸಲಾಗುವುದು ಎಂದು ಹೇಳಿದರು.




ಈ ವೇಳೆ ತಹಶೀಲ್ದಾರ್ ತಿರುಪತಿ ಪಾಟೀಲ್, ಪೊಲೀಸ್ ಇನ್ಸ್‌ಪೆಕ್ಟರ್ ತಿಮ್ಮಣ್ಣ, ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ಭೀಮನಗೌಡ ಪಾಟೀಲ್, ರಾಜಸ್ವ ನಿರೀಕ್ಷಕ ನಟರಾಜ್, ಲಕ್ಕಿಹಳ್ಳಿ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಹನುಮಂತಪ್ಪ, ಗ್ರಾಮಾಡಳಿತಾಧಿಕಾರಿ ಬಾಬು ದಳವಾಯಿ ಮತ್ತು ಶಾಲಾ ಮುಖ್ಯೋಪಾಧ್ಯಾಯ ಗುತ್ತಿಕಟ್ಟೆ ಪ್ರಕಾಶ್ ಸೇರಿದಂತೆ ಗ್ರಾ.ಪಂ ಸದಸ್ಯರು, ಅಂಗನವಾಡಿ ಮತ್ತು ಆಶಾ ಕಾರ್ಯಕರ್ತೆಯರು ಹಾಗೂ ಗ್ರಾಮದ ನೂರಾರು ಜನರಿದ್ದರು.

### ಪೊಲೀಸ್, ಗಣಿ ಇಲಾಖೆ ಕ್ಷಿಪ್ರ ಕಾರ್ಯಚರಣೆ

# ಅಕ್ರಮ ಮರಳು ದಾಸ್ತಾನು ಮೈಲನಹಳ್ಳಿಯಲ್ಲಿ ಪತ್ತೆ



» **ಚಳ್ಳಕೆರೆ**


ತಾಲ್ಲೂಕಿನ ಗಡಿಭಾಗದಲ್ಲಿ ವೇದಾವತಿ ನದಿಯ ದಡದಲ್ಲಿ ಕೆಲ ವ್ಯಕ್ತಿಗಳು ಕಾನೂನು ಬಾಹಿರವಾಗಿ ಮರಳನ್ನು ದಾಸ್ತಾನು ಮಾಡಿ, ಹೆಚ್ಚಿನ ದರಕ್ಕೆ ಮಾರಾಟ ಮಾಡುವುದಲ್ಲದೆ, ಸರ್ಕಾರ ಬೊಕ್ಕಸಕ್ಕೂ ನಷ್ಟ ಉಂಟು ಮಾಡುತ್ತಿರುವ ಬಗ್ಗೆ ಸಾರ್ವಜನಿಕರ ಮಾಹಿತಿ ಮೇರೆಗೆ ಲಕ್ಷಾಂತರ ರೂಪಾಯಿ ಬೆಳೆ ಬಾಳುವ ಸುಮಾರು 120 ಮೆಟ್ರಿಕ್‌ಟನ್ ಅಕ್ರಮ ಮರಳನ್ನು ಪೊಲೀಸ್ ಮತ್ತು ಗಣಿ ಮತ್ತು ಭೂವಿಜ್ಞಾನ ಇಲಾಖೆ ಅಧಿಕಾರಿಗಳ ಸಹಯೋಗದಲ್ಲಿ ವಶಪಡಿಸಿಕೊಂಡರು.

ತಾಲ್ಲೂಕಿನ ತಳಕು ಹೋಬಳಿಯ ಮೈಲನಹಳ್ಳಿ ಗ್ರಾಮದ ವೇದಾವತಿ ನದಿ ದಡದಲ್ಲಿ ಅಕ್ರಮ ಮರಳು ದಾಸ್ತಾನು ಮಾಡಿದ ಬಗ್ಗೆ ಸಾರ್ವಜನಿಕರ ಮಾಹಿತಿ ಮೇರೆಗೆ ಉಪವಿಭಾಗದ ಡಿವೈಎಸ್ಪಿ ಟಿ.ಬಿ.ರಾಜಣ್ಣ, ಜಿಲ್ಲಾ ಗಣಿ ಮತ್ತು ಭೂವಿಜ್ಞಾನ ಅಧಿಕಾರಿ ರೂಪ, ಪಿಎಸ್‌ಐ ಅಶ್ವಿನಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದಾಗ ಅಕ್ರಮ ಮರಳು ದಾಸ್ತಾನು ಮಾಡಿದ್ದು ಅದನ್ನು ವಶಪಡಿಸಿಕೊಳ್ಳಲಾಗಿದೆ.

ಪೊಲೀಸ್ ಇಲಾಖೆ ದಾಳಿ ನಡೆಸಿ ಅಕ್ರಮ ಮರಳು ವಶಪಡಿಸಿಕೊಂಡಿತಾದರೂ ಈ ಮರಳನ್ನು ಅಲ್ಲಿ ದಾಸ್ತಾನು ಮಾಡಿದವರು ಯಾರು ಎಂಬ ಬಗ್ಗೆ ಮಾಹಿತಿ ದೊರಕಿಲ್ಲ. ಕಳೆದ ಹಲವಾರು ವರ್ಷಗಳಿಂದ ಈ ದಂಧೆಯನ್ನೇ ಮಾಡುತ್ತಾ ಬಂದಿರುವವರು ಶೇಖರಣೆ ಮಾಡಿರ ಬಹುದು ಎಂದು ಶಂಕಿಸಲಾಗಿದೆ. ಪ್ರಕರಣ ದಾಖಲಿಸಿದ ತಳಕು ಪೊಲೀಸರು ಅಕ್ರಮ ಮರಳು ದಾಸ್ತಾನು ಮಾಡಿದವ ಪತ್ತೆಗೆ ಕ್ರಮ ಕೈಗೊಂಡಿದ್ದಾರೆ. ಸಾರ್ವಜನಿಕರಲ್ಲಿ ಡಿವೈಎಸ್ಪಿ ರಾಜಣ್ಣ, ವೇದಾವತಿ ನದಿ ಪಾತ್ರದಲ್ಲಿ ಎಲ್ಲಿಯಾದರೂ ಕಾನೂನು ಬಾಹಿರವಾಗಿ ಅಕ್ರಮ ಮರಳು ದಾಸ್ತಾನು ಮಾಡಿದಲ್ಲಿ ಪೊಲೀಸ್ ಇಲಾಖೆ ಗಮನಕ್ಕೆ ತರುವಂತೆ ಮನವಿ ಮಾಡಿದ್ದಾರೆ.

### ತಿಮ್ಮಣ್ಣನಹಳ್ಳಿ ಆಕಸ್ಮಿಕ ಬೆಂಕಿ: ಸುಟ್ಟುಹೋದ ಮೆಕ್ಕೆಜೋಳದ ಬಣವೆ

**ಚಳ್ಳಕೆರೆ:** ತಾಲ್ಲೂಕಿನ ತಳಕು ಹೋಬಳಿಯ ತಿಮ್ಮಣ್ಣನಹಳ್ಳಿ ಗ್ರಾಮದಲ್ಲಿ ಮಂಗಳವಾರ ಆಕಸ್ಮಿಕ ಬೆಂಕಿಗೆ ಗ್ರಾಮದ ತಿಪ್ಪೇಸ್ವಾಮಿ ಎಂಬುವವರ ಕಣದಲ್ಲಿದ್ದ ಮೆಕ್ಕೆಜೋಳದ ಬಣವೆಗೆ ಬೆಂಕಿ ಬಿದ್ದು ಬಣವೆ ಸಂಪೂರ್ಣ ಸುಟ್ಟು 30 ಸಾವಿರ ನಷ್ಟ ಸಂಭವಿಸಿದೆ. ಸ್ಥಳಕ್ಕೆ ಭೇಟಿ ನೀಡಿದ ಕಂದಾಯ ಇಲಾಖೆ ಅಧಿಕಾರಿಗಳು ನಷ್ಟದ ಬಗ್ಗೆ ಹಿರಿಯ ಅಧಿಕಾರಿಗಳಿಗೆ ವರದಿ ಕಳಿಸಿದ್ದಾರೆ. ಸ್ಥಳಕ್ಕೆ ಬಂದ ಅಗ್ನಿಶಾಮಕ ಪಡೆ ಬೆಂಕಿ ನಿಯಂತ್ರಿಸುವಲ್ಲಿ ಯಶಸ್ವಿಯಾಗಿದೆ.



## ಪ್ರಮುಖ ಸುದ್ದಿ

# ಮಾಧ್ಯಮ ಉದ್ಯಮವಾಗಿ ಪರಿವರ್ತನೆ: ಸಾಯಿನಾಥ್

» **ಚಿತ್ರದುರ್ಗ**

ಮಾಧ್ಯಮ ಮತ್ತು ಮನರಂಜನಾ ಕ್ಷೇತ್ರ ದೊಡ್ಡ ಉದ್ಯಮವಾಗಿ ಪರಿವರ್ತನೆ ಹೊಂದಿದೆ. ಅತಿ ಹೆಚ್ಚು ಮಾಧ್ಯಮಗಳನ್ನು ಹೊಂದಿದ ಅಂಬಾನಿ, ಬಿರ್ಲಾ ತರಹದ ಬಂಡವಾಳಶಾಹಿಗಳು ಸರ್ಕಾರಕ್ಕೆ ಹತ್ತಿರದಲ್ಲಿದ್ದಾರೆ ಎಂದು ಪತ್ರಕರ್ತ ಪಿ.ಸಾಯಿನಾಥ್ ಕಳವಳ ವ್ಯಕ್ತಪಡಿಸಿದರು.

ನಗರದಲ್ಲಿ ಸೋಮವಾರ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ಏರ್ಪಡಿಸಿದ್ದ ದತ್ತಿನಿಧಿ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಅವರು ಮಾತನಾಡಿ, ದೇಶದ ಪ್ರಧಾನಿ 10 ವರ್ಷಗಳಿಂದ ಪತ್ರಿಕಾ ಗೋಷ್ಠಿ ನಡೆಸದಿದ್ದರೂ ಮಾಧ್ಯಮ ಪ್ರಶ್ನಿಸುತ್ತಿಲ್ಲ. ಭಾರತದಲ್ಲಿ ಮಾಧ್ಯಮಕ್ಕೆ ಸರ್ಕಾರಕ್ಕಿಂತ ಹೆಚ್ಚಾಗಿ ಮಾಲೀಕರು ಅಡ್ಡಿಯಾಗಿದ್ದಾರೆ ಎಂದು ಹೇಳಿದರು.

ವಿಶ್ವ ಪತ್ರಿಕಾ ಸ್ವಾತಂತ್ರ್ಯ ಸೂಚ್ಯಂಕದಲ್ಲಿ ಭಾರತ ಪ್ರತಿ ವರ್ಷವೂ ಕುಸಿತದ ಹಂತದಲ್ಲಿದೆ. ಯಾವುದೇ ಪಕ್ಷದ ನೇತೃತ್ವದ ಸರ್ಕಾರ ಅಧಿಕಾರಕ್ಕೆ ಬಂದಾಗಲೂ ಪತ್ರಿಕಾ ಸ್ವಾತಂತ್ರ್ಯ ಸೂಚ್ಯಂಕದಲ್ಲಿ ಸುಧಾರಣೆ ಕಾಣುತ್ತಿಲ್ಲ ಎಂದರು.




ಪ್ಯಾರಿಸ್‌ನ ರಿಪೋರ್ಟರ್ಸ್ ವಿದೌಟ್ ಬಾರ್ಡರ್ಸ್ ಸಂಸ್ಥೆ ಈ ಸೂಚ್ಯಂಕವನ್ನು ಪ್ರತಿ ವರ್ಷ ಬಿಡುಗಡೆ ಮಾಡುತ್ತಿದೆ. 1990 ದಶಕಲ್ಲಿದ್ದ ಸೂಚ್ಯಂಕ ಕಾಂಗ್ರೆಸ್ ನೇತೃತ್ವದ ಯುಪಿಎ ಸರ್ಕಾರದ ಅವಧಿಯಲ್ಲಿ ಇನ್ನಷ್ಟು ಕುಸಿಯಿತು. ಸೂಚ್ಯಂಕದಲ್ಲಿ ಸುಧಾರಣೆ ತರಬೇಕಾದ ಬಿಜೆಪಿ ನೇತೃತ್ವದ ಎನ್‌ಡಿಎ ಸರ್ಕಾರದಲ್ಲಿ ಮತ್ತಷ್ಟು ಪಾತಾಳಕ್ಕೆ ಇಳಿಯಿತು. ಪ್ರತಿ ವರ್ಷವೂ ಪತ್ರಿಕಾ ಸ್ವಾತಂತ್ರ್ಯವನ್ನು ಕಳೆದುಕೊಳ್ಳುತ್ತಿದ್ದೇವೆ ಎಂದು ಆತಂಕ ಹೊರಹಾಕಿದರು.

ಕೋವಿಡ್‌ನಿಂದ ಭಾರತದಲ್ಲಿ ಎಷ್ಟು ಜನರು ಮೃತಪಟ್ಟರು ಎಂಬುದನ್ನು ಯಾವ ಮಾಧ್ಯಮವೂ ಸರಿಯಾಗಿ ವರದಿ ಮಾಡಿಲ್ಲ. ವಿಶ್ವ ಆರೋಗ್ಯ ಸಂಸ್ಥೆ (ಡಬ್ಲ್ಯುಎಚ್‌ಒ) ಬಿಡುಗಡೆ ಮಾಡಿದ ವರದಿಯ ಪ್ರಕಾರ ದೇಶದಲ್ಲಿ ಕೋವಿಡ್‌ಗೆ 47 ಲಕ್ಷ ಜನರು ಬಲಿಯಾಗಿದ್ದಾರೆ. ಕೇಂದ್ರ ಸರ್ಕಾರದ ವರದಿಯ ಪ್ರಕಾರ ಮೃತಪಟ್ಟವರ ಸಂಖ್ಯೆ 4.80 ಲಕ್ಷ ಮಾತ್ರ. ಸರ್ಕಾರದ ಈ ಬೋಗಸ್ ಅಂಕಿ ಅಂಶವನ್ನು ಮಾಧ್ಯಮಗಳು ಪ್ರಶ್ನಿಸಲಿಲ್ಲ ಎಂದರು.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಶಿವನಂದ ತಗಡೂರು, ಪ್ರಧಾನ ಕಾರ್ಯದರ್ಶಿ ಜಿ.ಸಿ.ಲೋಕೇಶ್, ಉಪಾಧ್ಯಕ್ಷರಾದ ಅಜ್ಜಮಾಡ ರಮೇಶ್ ಕುಟ್ಟಪ್ಪ, ಭವಾನಿಸಿಂಗ್ ಠಾಕೂರ್, ಕಾರ್ಯದರ್ಶಿ ನಿಂಗಪ್ಪ ಚಾವಡಿ, ಖಜಾಂಚಿ ವಾಸುದೇವ ಹೊಳ್ಳ, ಜಿಲ್ಲಾ ಘಟಕದ ಅಧ್ಯಕ್ಷ ದಿನೇಶ್ ಗೌಡಗೆರೆ, ಎಸ್‌ಆರ್‌ಎಸ್ ಸಮೂಹ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಬಿ.ಎ.ಲಿಂಗಾರೆಡ್ಡಿ ಇದ್ದರು

## ಫಾಸ್ಟ್ ನ್ಯೂಸ್

### ಕಾಂಗ್ರೆಸ್ ಪಕ್ಷದಿಂದ ಸಾಮಾಜಿಕ ನ್ಯಾಯ ದೊರಕಿಲ್ಲ: ವೆಂಕಟರಮಣಪ್ಪ

» ಮೊದಲ ಪುಟದಿಂದ

ಕಾಂಗ್ರೆಸ್ ಪಕ್ಷ ಬಲಗೈ, ಎಡಗೈ ಸಮುದಾಯಗಳಿಗೆ ಮಾತ್ರ ನಿರಂತರವಾಗಿ ಟಿಕೆಟ್ ನೀಡಿದರೆ ನಾವು ಎಲ್ಲಿಗೆ ಹೋಗಬೇಕು ಎಂದು ಪ್ರಶ್ನಿಸಿದರು. ಎರಡ್ಮೂರು ದಿನಗಳಲ್ಲಿ ನಮ್ಮ ಸಮಾಜ ಮುಖಂಡರ ಮತ್ತು ಜನಗಳ ಸಭೆಯನ್ನು ಬೆಂಗಳೂರಿನಲ್ಲಿ ನಡೆಸಿ ಅಭಿಪ್ರಾಯ ಸಂಗ್ರಹಣೆ ಮಾಡುವ ಮೂಲಕ ಒಗ್ಗಟ್ಟಿನಿಂದ ಒಂದು ತಿರ್ಮಾನಕ್ಕೆ ಬರಲಾಗುವುದು. ಬಿಜೆಪಿ ಮತ್ತು ಜೆಡಿಎಸ್ ಸಮ್ಮಿಶ್ರದಲ್ಲಿ ನಮಗೆ ಕೋಲಾರದಲ್ಲಿ ಟಿಕೆಟ್ ನೀಡಿದ್ದಾರೆ. 1983 ರಿಂದ ಭೋವಿ ಸಮಾಜಕ್ಕೆ ಕಾಂಗ್ರೆಸ್ ಪಕ್ಷದಲ್ಲಿ ಟಿಕೆಟ್ ನೀಡುತ್ತಿಲ್ಲ. ನಿಗಮ ಮಂಡಳಿಗಳ ನೇಮಕದಲ್ಲಿ ನಮ್ಮ ಸಮಾಜಕ್ಕೆ ಅನ್ಯಾಯವಾಗಿದೆ. ಒಂದು ಸ್ಥಾನ ಸಹ ನೀಡಿಲ್ಲ. ವರಿಷ್ಠರು ನನ್ನನ್ನು ಮನವೊಲಿಸಿದರು ಸಹ ನಮ್ಮ ಸಮಾಜಕ್ಕೆ ನ್ಯಾಯ ಕೊಟ್ಟರೆ ಮಾತ್ರ ಕಾಂಗ್ರೆಸ್ ಬೆಂಬಲಿಸುತ್ತೇವೆ ಎಂದು ಕಾಂಗ್ರೆಸ್ ಪಕ್ಷಕ್ಕೆಎಚ್ಚರಿಕೆ ನೀಡಿದರು. ಕೆಪಿಸಿಸಿ ಸದಸ್ಯ ರಾಮಪ್ಪ ಮಾತನಾಡಿ ಕಾಂಗ್ರೆಸ್ ಪಕ್ಷದಲ್ಲಿ ಸಾಮಾಜಿಕ ನ್ಯಾಯದಡಿ ಟಿಕೆಟ್ ನೀಡುವ ವಿಶ್ವಾಸವಿತ್ತು.ಆದರೆ ಸುರ್ಜೆವಾಲ್ , ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ.ಶಿವಕುಮಾರ್ ಸೇರಿ ಎಲ್ಲಾರೂ ನ್ಯಾಯ ಒದಗಿಸುವ ಭರವಸೆ ನೀಡಿದ್ದರು. ಆದರೆ ವಿವಿಧ ಲೆಕ್ಕಚಾರದಲ್ಲಿ ನಮಗೆ ಟಿಕೆಟ್ ಕೈ ತಪ್ಪಿದೆ. ಆದರೆ ಈಗಲೂ ಅವಕಾಶವಿದ್ದು ಚಿತ್ರದುರ್ಗ ಲೋಕಸಭೆ ಕ್ಷೇತ್ರಕ್ಕೆ ಸಿ.ಫಾರಂ ನೀಡಿ ನಮಗೆ ನ್ಯಾಯ ನೀಡಬಹುದು ಎಂದು ಹೇಳಿದರು. ಈ ಸಂದರ್ಭದಲ್ಲಿ ಭೋವಿ ಸಮಾಜದ ಜಿಲ್ಲಾಧ್ಯಕ್ಷ ತಿಪ್ಪೇಸ್ವಾಮಿ , ಮಾಜಿ ಜಿ. ಪಂ.ಸದಸ್ಯ ತಿಪ್ಪೇಸ್ವಾಮಿ ಮುಖಂಡರಾದ ಪ್ರಕಾಶ್ ,ಕುಮಾರ್ ಇದ್ದರು.

### ಅಬಕಾರಿ ಅಧಿಕಾರಿಗಳ ದಾಳಿ; ಬೈಕ್‌ನಲ್ಲಿ ಅಕ್ರಮ ಮದ್ಯ ಸಾಗಾಟ : ಬೈಕ್ ಬಿಟ್ಟು ಪರಾರಿಯಾದ ವ್ಯಕ್ತಿ



» ಚಳ್ಳಕೆರೆ

ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಅಕ್ರಮ ಮದ್ಯ ಮಾರಾಟ ನಿಯಂತ್ರಿಸುವ ನಿಟ್ಟಿನಲ್ಲಿ ಅಬಕಾರಿ ಇಲಾಖೆ ಅಧಿಕಾರಿಗಳು ತಪಾಸಣಾ ಕಾರ್ಯವನ್ನು ಮುಂದುವರೆಸಿದ್ದು ಮಂಗಳವಾರ ಬಳ್ಳಾರಿ ರಸ್ತೆಯ ಚಳ್ಳಕೆರೆಯಮ್ಮ ದೇವಸ್ಥಾನದ ಬಳಿ ವ್ಯಕ್ತಿಯೊಬ್ಬ ಬೈಕ್ ಮೇಲೆ ಸುಮಾರು 5760ರೂ ಮೌಲ್ಯದ ಮದ್ಯವನ್ನು ತನ್ನ ಬೈಕ್‌ನಲ್ಲಿ ಸಾಗಾಟ ಮಾಡುತ್ತಿದ್ದ ಸಂದರ್ಭದಲ್ಲಿ ಅಬಕಾರಿ ಇಲಾಖೆ ಅಧಿಕಾರಿಗಳು ಬೈಕನ್ನು ವಶಪಡಿಸಿಕೊಂಡು ಅವನ ವಿಚಾರಣೆ ನಡೆಸುವ ಮುನ್ನವೇ ಆತ ಸ್ಥಳದಿಂದ ಪರಾರಿಯಾಗಿದ್ದಾನೆ. ಈ ಬಗ್ಗೆ ಮಾಹಿತಿ ನೀಡಿದ ಅಬಕಾರಿ ನಿರೀಕ್ಷಕ ಸಿ.ನಾಗರಾಜು, ಅಂದಾಜು 60 ಸಾವಿರ ಮೌಲ್ಯದ ಬೈಕ್, 5760ರೂ ಮೌಲ್ಯದ ಮದ್ಯ ವಶಪಡಿಸಿಕೊಂಡು ಆರೋಪಿ ವಿರುದ್ಧ ಪ್ರಕರಣ ದಾಖಲಿಸಲಾಗಿದೆ. ಆರೋಪಿಯನ್ನು ಪತ್ತೆಹಚ್ಚುವ ಕಾರ್ಯ ಮುಂದುವರೆದಿದೆ ಎಂದರು. ಕಾರ್ಯಚರಣೆಯಲ್ಲಿ ಅಬಕಾರಿ ಉಪನಿರೀಕ್ಷಕರಾದ ಡಿ.ಟಿ.ತಿಪ್ಪಯ್ಯ, ರೇಖಾ, ಮುಖ್ಯಪೇದೆಗಳಾದ ನಾಗರಾಜು, ಸೋಮಶೇಖರ್, ಮಂಜುಳಾ ಭಾಗವಹಿಸಿದ್ದರು.

### ಜಿಲ್ಲಾ ಸಹಕಾರ ಯೂನಿಯನ್ ಅಧ್ಯಕ್ಷರಾಗಿ ಹೆಚ್.ಎಂ.ದ್ಯಾಮಣ್ಣ ಆಯ್ಕೆ



» ಚಿತ್ರದುರ್ಗ

ಮಾರ್ಚ್ 30 ರಂದು ನಡೆದ ಚಿತ್ರದುರ್ಗ ಜಿಲ್ಲಾ ಸಹಕಾರ ಯೂನಿಯನ್ನಿನ ಪದಾಧಿಕಾರಿಗಳ ಚುನಾವಣೆಯಲ್ಲಿ ಉಳಿದ ಅವದಿಗೆ ಅಧ್ಯಕ್ಷರಾಗಿ ಹೆಚ್.ಎಂ. ದ್ಯಾಮಣ್ಣ ಹಾಗೂ ಉಪಾಧ್ಯಕ್ಷರಾಗಿ ಹೆಚ್.ವಿ. ಪ್ರತಾಪ್ ಸಿಂಹ ಅವರು ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ಈ ಸಂದರ್ಭದಲ್ಲಿ ಚಿತ್ರದುರ್ಗ ಜಿಲ್ಲಾ ಸಹಕಾರ ಯೂನಿಯನ್ ನಿರ್ದೇಶಕ ಹಾಗೂ ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳದ ನಿರ್ದೇಶಕ ಆರ್.ರಾಮರೆಡ್ಡಿ, ಜಿಲ್ಲಾ ಸಹಕಾರ ಯೂನಿಯನ್ನಿನ ನಿರ್ದೇಶಕರುಗಳಾದ ಜಿಂಕಲು ಬಸವರಾಜ್, ಜೆ.ಪ್ರಕಾಶ್, ಸಂಜೀವಮೂರ್ತಿ, ಮಾತೃಶ್ರೀ ಎನ್. ಮಂಜುನಾಥ್, ಜಿ.ಈ.ಅಜ್ಜಪ್ಪ, ಕೆ.ಹೆಚ್.ಜಗನ್ನಾಥ್, ಟಿ.ಮಹಂತೇಶ್, ಹಾಗೂ ಮಾರಾಟಾಧಿಕಾರಿ ಮತ್ತು ಚುನಾವಣಾಧಿಕಾರಿ ಕೆ. ಕೃಷ್ಣಮೂರ್ತಿ, ಯೂನಿಯನ್ನಿನ ಮುಖ್ಯ ಕಾರ್ಯನಿರ್ವಹಣಾಧಿಕಾರಿ ನಾಗರಾಜ್ ಪಾಟೀಲ್ ಹಾಗೂ ಸಿಬ್ಬಂದಿ ವರ್ಗ ಹಾಜರಿದ್ದರು.

### ದೈಹಿಕ ಕ್ಷಮತೆ ಕಾಪಾಡಿಕೊಳ್ಳಲು ಸ್ಮಾರ್ಟ್ ತಂತ್ರಜ್ಞಾನ ಆಧಾರಿತ ವ್ಯಾಯಾಮ ಪರಿಕರಗಳ ವಿತರಣೆ

# ಪೊಲೀಸರ ಬೊಜ್ಜಿನ ಸಮಸ್ಯೆಗೆ ವಿನೂತನ ಪ್ರಯತ್ನ

» ಚಿತ್ರದುರ್ಗ

ಕೆಲಸದ ಒತ್ತಡ, ಸರಿಯಾದ ಸಮಯಕ್ಕೆ ಊಟ ಮಾಡದೆ ಇರುವುದು ಹಾಗೂ ವ್ಯಾಯಾಮದ ಕೊರತೆಯಿಂದ ಪೊಲೀಸರ ಆರೋಗ್ಯ ಮೇಲೆ ದುಷ್ಪರಿಣಾಮ ಉಂಟಾಗುತ್ತಿದೆ. ಇದರಿಂದ ಬಹಳ ಜನರಲ್ಲಿ ತೂಕ ಹೆಚ್ಚಾಗುವುದು, ಸಕ್ಕರೆ ಕಾಯಿಲೆ ಸೇರಿದಂತೆ ಜೀವನ ಅಭ್ಯಾಸಕ್ಕೆ ಸಂಬಂದಿಸಿದ ಹಲವು ರೋಗಗಳು ಬರುತ್ತವೆ.

ಬಹಳಷ್ಟು ಜನ ಪೊಲೀಸರಲ್ಲಿ ಬೊಜ್ಜಿನ ಸಮಸ್ಯೆ ಕಂಡುಬರುತ್ತಿದೆ. ಪೊಲೀಸರಲ್ಲಿ ಹೆಚ್ಚುತ್ತಿರುವ ಬೊಜ್ಜಿನ ಸಮಸ್ಯೆ ನಿವಾರಣೆಗೆ ಜಿಲ್ಲಾ ಪೊಲೀಸ್ ಇಲಾಖೆ ವತಿಯಿಂದ ವಿನೂತನ ಪ್ರಯತ್ನ ಕೈಗೊಳ್ಳಲಾಗಿದೆ. ಇಸ್ರೇಲ್ ಮೂಲದ ಹೈಗೇರ್ ಕಂಪನಿ ಸಹಯೋಗದಲ್ಲಿ ಪೊಲೀಸರ ದೈಹಿಕ ಕ್ಷಮತೆ ಕಾಪಾಡಿಕೊಳ್ಳಲು ಸ್ಮಾರ್ಟ್ ತಂತ್ರಜ್ಞಾನ ಆಧಾರಿತ ವ್ಯಾಯಮ ಪರಿಕರಗಳನ್ನು ನೀಡಲಾಗಿದೆ.

ಮಂಗಳವಾರ ನಗರದ ಜಿಲ್ಲಾ ಸಶಸ್ತ್ರ ಮೀಸಲು ಪಡೆಯ ಉಪಾಧೀಕ್ಷಕರ ಕಚೇರಿಯಲ್ಲಿ, ನಡೆದ ಕಾರ್ಯಕ್ರಮದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಧರ್ಮೇಂದ್ರ ಕುಮಾರ್ ಮೀನಾ 60 ಜನ ಪೊಲೀಸ್ ಸಿಬ್ಬಂದಿಗೆ ಉಚಿತವಾಗಿ ಪರಿಕರಗಳನ್ನು ವಿತರಿಸಿದರು.

**ಆರೋಗ್ಯ ಕಾಳಜಿಗೆ ಸ್ಮಾರ್ಟ್ ತಂತ್ರಜ್ಞಾನ:** ಹೈಗೇರ್ ಕಂಪನಿಯ ಎಲಾಸ್ಟಿಕ್ ಬೆಲ್ಟ್ ದೈಹಿಕ ವ್ಯಾಯಾಮ ಮಾಡಲು ಅನುಕೂಲವಾಗಿದೆ. ಇದಕ್ಕೆ ಬ್ಲೂಟೂತ್ ಅಳವಡಿಸಲಾಗಿದ್ದು, ನಿಮ್ಮ ಸ್ಮಾರ್ಟ್ ಫೋನ್ ಸಂಪರ್ಕದಲ್ಲಿ ಇರುತ್ತದೆ. ಇದರೊಂದಿಗೆ ಕೈಗೆ ಧರಿಸಲು ಸ್ಮಾರ್ಟ್ ವಾಚ್ ಸಹಿತ ನೀಡಲಾಗಿದೆ.

ಸ್ಮಾರ್ಟ್‌ವಾಚ್ ದೈನಂದಿನ ನಡಿಗೆ, ಹೃದಯ ಬಡಿತ, ಕ್ಯಾಲೋರಿಗಳ ವ್ಯಯದ ಬಗ್ಗೆ ಮಾಹಿತಿ ಇರುತ್ತದೆ. ನಿಮ್ಮ ಸ್ಮಾರ್ಟ್ ಫೋನ್‌ನಲ್ಲಿ ಹೈಗೇರ್ ತಂತ್ರಾಶ ಅಳವಡಿಸಿಕೊಂಡರೆ ನಿಮ್ಮ ದೈನದಿಂನ ಚಟುವಟಿಕೆಗಳ ಸಕಲ ಮಾಹಿತಿ ಇದರಲ್ಲಿ ಶೇಖರಣೆಯಾಗಲಿದೆ. ಜಿಮ್ ಹಾಗೂ ದೈಹಿಕ ವ್ಯಾಯಾಮಗಳನ್ನು ಮಾಡಲು ಹೊರಗಡೆ ಹೊಗುವ ಅವಶ್ಯಕತೆ ಇಲ್ಲ. ಮನೆಯಲ್ಲಿ ಅಥವಾ ಕೆಲಸದ ಸ್ಥಳಗಳಲ್ಲಿಯೇ ವ್ಯಾಯಾಮದ ಎಲಾಸ್ಟಿಕ್ ಬೆಲ್ಟ್ ಅನ್ನು ಮರ, ಕಂಬ, ಕಿಟಕಿಗಳಿಗೆ ನೇತು ವ್ಯಾಯಾಮ ಮಾಡಬಹುದು. ಸುಮಾರು 410ಕ್ಕೂ ವಿವಿಧ ವ್ಯಾಯಾಮಗಳಿಗೆ ಎಲಾಸ್ಟಿಕ್ ಬೆಲ್ಟ್ ಅನುಕೂಲವಾಗಿದೆ.





### 120 ಜನ ಪೊಲೀಸರಿಗೆ ವಿತರಣೆ

ಜಿಲ್ಲೆಯ ಪೊಲೀಸರ ವೈದ್ಯಕೀಯ ತಪಾಸಣೆ ಒಳಪಡಿಸಿದ ನಂತರ 134 ಪೊಲೀಸರ ದೈಹಿಕ ತೂಕ ಸೂಚ್ಯಂಕ ಪ್ರಮಾಣ 29ಕ್ಕಿಂತ ಹೆಚ್ಚಿರುವುದು ಕಂಡುಬಂದಿದೆ. ಇವರಲ್ಲಾ ಬೊಜ್ಜಿನ ಸಮಸ್ಯೆಗೆ ಒಳಗಾಗಿದಾರೆ. ಇದರಿಂದಾಗಿ ನಾನಾ ಕಾಯಿಲೆಗಳಿಗೆ ತುತ್ತಾಗುವ ಸಂಭವವಿದೆ. ಬೊಜ್ಜು ಇರುವ ಪೊಲೀಸ್ ಸಿಬ್ಬಂದಿಗೆ ಈಗಾಗಲೇ ಹೃದಯ ತ್ಞಜರು, ಫಿಜಿಯೋ ತೆರಪಿಸ್ಟ್ ಸೇರಿದಂತೆ ಅಗತ್ಯ ವೈದ್ಯಕೀಯ ತಪಾಸಣೆ ಮಾಡಲಾಗಿದೆ. ಅವರ ಆಹಾರ ಕ್ರಮ, ದೈಹಿಕ ಸಾಮರ್ಥ್ಯ ಅರಿತು, ವ್ಯಾಯಾಮದ ಗುರಿ ನಿಗದಿ ಮಾಡಲಾಗಿದೆ. ದೈಹಿಕ ಕ್ಷಮತೆ ಕಾಪಾಡಿಕೊಳ್ಳಲು ಸ್ಮಾರ್ಟ್ ತಂತ್ರಜ್ಞಾನ ಆಧಾರಿತ ಪರಿಕರಗಳನ್ನು 120 ಪೊಲೀಸರಿಗೆ ಉಚಿತವಾಗಿ ನೀಡಲಾಗುತ್ತಿದೆ.ಇವರಿಗೆ ವ್ಯಾಯಮ ಪರಿಕರಗಳನ್ನು ಉಪಯೋಗಿಸುವ ಕುರಿತು ಮಾಹಿತಿ ನೀಡಲಾಗುವುದು. ತಂತ್ರಾಶದಲ್ಲಿ ವ್ಯಾಯಾಮ ಮಾಡುವ ಕ್ರಮಗಳ ವಿಡಿಯೋಗಳು ಇವೆ. ಇದರಿಂದ ವೈಯಕ್ತಿಕ ತರಬೇತುದಾರರ ಅವಶ್ಯಕತೆ ಇರುವುದಿಲ್ಲ.

### ರಾಜ್ಯದಲ್ಲೇ ಮೊದಲ ಪ್ರಯತ್ನ

ಚಿತ್ರದುರ್ಗ ಜಿಲ್ಲಾ ಪೊಲೀಸ್ ಹಾಗೂ ಇಸ್ರೇಲ್ ಮೂಲದ ಹೈಗೇರ್ ಕಂಪನಿಯ ಸಹಯೋಗದಲ್ಲಿ ರಾಜ್ಯದಲ್ಲೇ ಮೊದಲ ಬಾರಿಗೆ ಬೊಜ್ಜಿನ ಸಮಸ್ಯೆಯಿಂದ ಬಳಲುತ್ತಿರುವ ಪೊಲೀಸರಿಗೆ ವ್ಯಾಯಾಮದ ಪರಿಕರ ನೀಡಲಾಗುತ್ತಿದೆ. ಹೈಗೇರ್ ಒಂದು ಬಹುರಾಷ್ಟ್ರೀಯ ಕಂಪನಿಯಾಗಿದ್ದು, ದೈಹಿಕ ಸಧೃಡತೆ ಕಾಪಾಡಿಕೊಳ್ಳುವ ಪರಿಕರಗಳ ತಯಾರಿಕೆಯಲ್ಲಿ ಮುಂಚೂಣಿಯಲ್ಲಿದೆ. ಇಸ್ರೇಲ್ ಪೊಲೀಸರಿಗೆ ಈ ಕಂಪನಿ ವ್ಯಾಯಾಮ ಪರಿಕರ ನೀಡಿ ಯಶಸ್ವಿಯಾಗಿದೆ. ನೆರೆಯ ತೆಲಂಗಾಣ ಪೊಲೀಸರೊಂದಿಗೂ ಹೈಗೇರ್ ಕಂಪನಿ ಪೊಲೀಸರ ಬೊಜ್ಜು ನಿವಾರಣೆಗೆ ಕೈ ಜೋಡಿಸಿದೆ.

ಪ್ರತಿದಿನ ಪೊಲೀಸ್ ಸಿಬ್ಬಂದಿ ಮಾಡುವ ವ್ಯಾಯಮಗಳ ಮಾಹಿತಿ ತಂತ್ರಾಶದಲ್ಲಿ ದಾಖಲು ಆಗಲಿದೆ. ಇದು ನೇರವಾಗಿ ಪೊಲೀಸ್ ವರಿಷ್ಠಾಧಿಕಾರಿಗಳಿಗೆ ತಲುಪಲಿದೆ. ಬೊಜ್ಜು ಇರುವ ಪೊಲೀಸರಲ್ಲಿ 3 ತಿಂಗಳ ಈ ಅವಧಿಯಲ್ಲಿ ಉಂಟಾಗುವ ಬದಲಾವಣೆ ಹಾಗೂ ಫಲಶೃತಿ ಮೌಲ್ಯಮಾಪನ ಮಾಡಲಾಗುವದು.

ಇದರೊಂದಿಗೆ ಪರಿಕರ ನೀಡದೆ ಇರುವ ಬೊಜ್ಜು ಹೊಂದಿರುವ ಪೊಲೀಸ್ ಸಿಬ್ಬಂದಿಯಆರೋಗ್ಯಸಹಮೌಲ್ಯಮಾಪನ ಮಾಡಿ, ತಾಳೆ ನೋಡಲಾಗುವುದು. ಪರಿಣಾಮಕಾರಿ ಎನಿಸಿದರೆ, ಮುಂದಿನ ದಿನಮಾನಗಳಲ್ಲಿ ಖಾಸಗಿ ಕಂಪನಿಗಳ ಸಾಮಾಜಿಕ ಹೊಣೆಗಾರಿಕೆ ನಿಧಿಯಡಿ ಉಳಿದ ಪೊಲೀಸರಿಗೂ ವ್ಯಾಯಾಮ ಪರಿಕರವನ್ನು ವಿತರಣೆ ಮಾಡುವುದಾಗಿ ಪೊಲೀಸ್ ವರಿಷ್ಠಾಧಿಕಾರಿ ಧರ್ಮೇಂದ್ರ ಕುಮಾರ್ ಮೀನಾ ತಿಳಿಸಿದ್ದಾರೆ.

ಹೈಗೇರ್ ಕಂಪನಿ ಜನರ ಜೀವನದಲ್ಲಿ ಬದಲಾವಣೆ ತರುವುದರಲ್ಲಿ ಸಹಾಯ ಮಾಡುತ್ತಿದೆ. ಪೊಲೀಸರು ಸಹ ಸಮಾಜ ಸ್ವಾಸ್ಥ ಕಾಪಾಡುತ್ತಾರೆ. ಇನ್ನೊಬ್ಬರಿಗೆ ನೆರವು ನೀಡುತ್ತಾರೆ. ಇಂತಹ ಪೊಲೀಸರು ಆರೋಗ್ಯದಕಾಳಜಿಯೂಮುಖ್ಯವಾದದು. ಈ ನಿಟ್ಟಿನಲ್ಲಿ ಚಿತ್ರದುರ್ಗ ಪೊಲೀಸ್ ಇಲಾಖೆ ಸಹಯೋಗದಲ್ಲಿ ಸ್ಮಾರ್ಟ್ ತಂತ್ರಾಶ ಆಧಾರಿತ ದೈಹಿಕ ವ್ಯಾಯಾಮ ಪರಿಕರಗಳನ್ನು ಪೊಲೀಸ್ ಸಿಬ್ಬಂದಿ ನೀಡಲಾಗಿದೆ. ಪೊಲೀಸರ ಸ್ವಾಸ್ಥ ದ ಕನಸಿನ ಮಾರ್ಗದ ಕಡೆಗೆ ಮುಂದಡಿ ಇಡಲಾಗಿದೆ ಎಂದು ಹೈಗೇರ್ ಕಂಪನಿ ಎಲಿ ಪಾಂಪ್‌ಲಿಂಗರ್ ಈ ಸಂದರ್ಭದಲ್ಲಿ ಹೇಳಿದರು.

ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಎಸ್.ಜೆ.ಕುಮಾರಸ್ವಾಮಿ ಸೇರಿದಂತೆ ಇತರೆ ಪೊಲೀಸ್ ಅಧಿಕಾರಿಗಳು ಹಾಗೂ ಸಿಬ್ಬಂದಿ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

# ಲೋಕಸಭಾ ಚುನಾವಣೆಯಲ್ಲಿ ಹಣ ಹಂಚುವ ಕುರಿತು ಮಾತನಾಡಿದ ಬಿಜೆಪಿ ಮುಖಂಡನ ವಿಡಿಯೋ ವೈರಲ್?

» ಮೊಳಕಾಲ್ಮುರು

ಲೋಕಸಭಾ ಚುನಾವಣೆ ದಿನದಿಂದ ದಿನಕ್ಕೆ ರಂಗೇರುತ್ತಿದೆ.ಚುನಾವಣೆ ಗೆಲ್ಲಲು ಬಿಜೆಪಿ ಮತ್ತು ಕಾಂಗ್ರೆಸ್ ಪಕ್ಷಗಳು ಹಲವು ರಣತಂತ್ರಗಳನ್ನು ರೂಪಿಸುತ್ತಿವೆ.ಇತ್ತ ಚುನಾವಣಾ ಆಯೋಗ ಮಾತ್ರ ಲೋಕಸಭಾ ಚುನಾವಣೆಯನ್ನು ಪಾರದರ್ಶಕವಾಗಿ ನಡೆಸಲು ಹಲವಾರು ಕಠಿಣ ನಿಯಮಗಳನ್ನು ಜಾರಿಗೊಳಿಸಿದೆ,ಆದರೆ ಪಕ್ಷಗಳ ಮುಖಂಡರು ಮಾತ್ರ ಮತದಾರರನ್ನು ತಮ್ಮತ್ತ ಸೆಳೆಯಲು ಹಣ ಹಂಚುವ ಲೆಕ್ಕಾಚಾರದಲ್ಲಿ ಮುಳುಗಿದ್ದಾರೆ.

ಮೊಳಕಾಲ್ಮೂರುಪಟ್ಟಣದಬಿಜೆಪಿಕಚೇರಿಯಲ್ಲಿ ಮಂಗಳವಾರದಂದು ಮೊಳಕಾಲ್ಮೂರು ಬಿಜೆಪಿ ಮಂಡಲದಿಂದ ಚಿತ್ರದುರ್ಗ ಲೋಕಸಭಾ ಅಭ್ಯರ್ಥಿ ಗೋವಿಂದ ಕಾರಜೋಳ ನಾಮಪತ್ರ ಸಲ್ಲಿಕೆಯ ಮೆರವಣಿಗೆ ಕುರಿತಾಗಿ ಪೂರ್ವಭಾವಿ ಸಭೆ ಕರೆಯಲಾಗಿತ್ತು.

ಸಭೆಯಲ್ಲಿ ಬಿಜೆಪಿ ಅಧ್ಯಕ್ಷರು ಸೇರಿದಂತೆ ವಿವಿಧ ಮೋರ್ಚಗಳ ಅಧ್ಯಕ್ಷರು ಬಿಜೆಪಿ ಅಭ್ಯರ್ಥಿ ಗೆಲ್ಲಲು ಅವರವರ ಅನಿಸಿಕೆ, ಅಭಿಪ್ರಾಯಗಳನ್ನು ವ್ಯಕ್ತಪಡಿಸಿದ್ದರು.ಸಭೆಯಲ್ಲಿ ಬಿಜೆಪಿ ಎಸ್ ಟಿ ಮೋರ್ಚಾ ಅಧ್ಯಕ್ಷರಾದ ಜಿರಳ್ಳಿ ತಿಪ್ಪೇಸ್ವಾಮಿಯವರ ಭಾಷಣದ ಸರದಿ ಬರುತ್ತಿದ್ದಂತೆ,ಬೇರೆ ತಾಲೂಕುಗಳ ಅಭಿಪ್ರಾಯ ಹೇಗಿದೆಯೋ ಗೊತ್ತಿಲ್ಲ!? ಆದ್ರೆ ನಾವು ಮಾತ್ರ ವಿರೋಧ ಪಕ್ಷ ಹಂಚುವ ಹಣಕ್ಕಿಂತ ನೂರು ರೂಪಾಯಿ ಹೆಚ್ಚಾಗಿ ಹಂಚಬೇಕು

.ಅವರು ಏನು ಕೊಡದೇ ಹೋದರು ನಾವು ನೂರು ರೂಪಾಯಿ ಹೆಚ್ಚು ಕೊಡಿಸಬೇಕು. ನಮ್ಮ ತಾಲೂಕಿನಲ್ಲಿ ದುಡ್ಡು ಬಿಟ್ಟರೆ ಯಾವುದೇ ಬೇರೆ ಮಾನದಂಡವಿಲ್ಲ ಮಂಡಲ ಅಧ್ಯಕ್ಷರು ಮುನ್ಸೂಚನೆ ಕೊಟ್ಟರೆ 500 ರಿಂದ 600 ವ್ಯವಸ್ಥೆ ಮಾಡುತಿದ್ದೆ ಎಂದು ಅಜ್ಜರು ಈಗಾಗಲೇ ಹೇಳಿದ್ದಾರೆ.500 ರೂಪಾಯಿಯಂತೆ ಫಿಕ್ಸ್ ಮಾಡೋಣ ಸಭೆಯಲ್ಲಿ ಹೇಳಿರುವ ವಿಡಿಯೋ ಇದೀಗ ವೈರಲ್ ಆಗುತ್ತಿದೆ.

ಇವರ ಮಾತಿಗೆ ಸಭೆಯಲ್ಲಿದ್ದ ಹಲವು ಬಿಜೆಪಿ ಕಾರ್ಯಕರ್ತರು ಚಪ್ಪಾಳೆ ಹೊಡೆದು ಇವರ ಒಪ್ಪಿಗೆ ಸೂಚಿಸಿದರೆ, ಇನ್ನು ಕೆಲವರು ಈ ಸಭೆಯಲ್ಲಿ ಹಣ ಹಂಚುವ ವಿಚಾರ ಮಾತನಾಡುವುದು ಸರಿಯಲ್ಲ ಎಂದು ವಿರೋಧ ವ್ಯಕ್ತಪಡಿಸಿದರು. ಒಟ್ಟಿನಲ್ಲಿ ರಾಷ್ಟದ ಅಭಿವೃದ್ಧಿಯನ್ನೆ ಮುಖ್ಯ ಧ್ಯೇಯವನ್ನಾಗಿ ಚುನಾವಣೆ ನಡೆಸಲು ಮುಂದಾಗಿರುವ ಬಿಜೆಪಿ ಪಕ್ಷದಲ್ಲಿ ಹಣ ಹಂಚುವ ಕುರಿತು ಪಕ್ಷದ ಪ್ರಮುಖ ಹುದ್ದೆ ನಿಭಾಯಿಸುವ ಮುಖಂಡರೆ ಮಾತಾಡಿರುವುದು ವಿಪರ್ಯಾಸ ಅಷ್ಟೇ ಅಲ್ಲದೆ ಸಭೆಯಲ್ಲಿ ಮಾಧ್ಯಮದ ಪ್ರತಿನಿಧಿಗಳು ಇದ್ದರೂ ಬಿಜೆಪಿ ಮುಖಂಡನ ಈ ಹೇಳಿಕೆಯು ಚರ್ಚೆಗೆ ಗ್ರಾಸವಾಗಿದೆ.



### ಮತದಾನ ಚುರುಕುಗೊಳಿಸಲು ತಾಲ್ಲೂಕು ಸ್ವೀಫ್ ಸಮಿತಿಯಿಂದ ವಿವಿಧ ಕಾರ್ಯಕ್ರಮಗಳ ಆಯೋಜನೆ

» ಚಳ್ಳಕೆರೆ



ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಚಳ್ಳಕೆರೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಹೆಚ್ಚು ಮತದಾರರು ಮತದಾನ ಪ್ರಕ್ರಿಯೆಯಲ್ಲಿ ಕಡ್ಡಾಯವಾಗಿ ಪಾಲ್ಗೊಳ್ಳುವಂತೆ ಮಾಡಲು ಜಿಲ್ಲಾ ಸ್ವೀಪ್ ಸಮಿತಿ ಮಾರ್ಗದರ್ಶನದಲ್ಲಿ ತಾಲ್ಲೂಕು ಸ್ವೀಪ್ ಸಮಿತಿ ಹಲವಾರು ಕಾರ್ಯಕ್ರಮಗಳನ್ನು ರೂಪಿಸಿ ಕಾರ್ಯಗತಗೊಳಿಸಲಾಗುತ್ತಿದೆ ಎಂದು ತಾಲ್ಲೂಕು ಸ್ವೀಪ್ ಸಮಿತಿ ಕಾರ್ಯದರ್ಶಿ ಪೌರಾಯುಕ್ತ ಜೀವನ್‌ಕಟ್ಟಿಮನಿ ತಿಳಿಸಿದ್ದಾರೆ. ಅವರು, ಈ ಬಗ್ಗೆ ಮಾಹಿತಿ ನೀಡಿ, ಈಗಾಗಲೇ ಕಳೆದ ಸುಮಾರು 10 ದಿನಗಳಿಂದ ನಗರದಾದ್ಯಂತ ಸ್ವೀಪ್ ಸಮಿತಿ ವತಿಯಿಂದ ವಿವಿಧ ಹಂತಗಳಲ್ಲಿ ಮತದಾರರ ಜಾಗೃತಿಯನ್ನು ಮೂಡಿಸಲಾಗುತ್ತಿದೆ. ಏ.3 ಬುಧವಾರ ಚಳ್ಳಕೆರೆ ನಗರದ ಪ್ರಮುಖ ರಸ್ತೆಗಳಲ್ಲಿಅಂಗನವಾಡಿಮತ್ತುಆಶಾಕಾರ್ಯಕರ್ತೆಯರಸಹಯೋಗದಲ್ಲಿ ಮತದಾರ ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಮತದಾರರಲ್ಲಿ ಹೆಚ್ಚು ಆಸಕ್ತಿ ಮೂಡಿ ಮತದಾನ ಮಾಡಲು ಸ್ವಯಂಪ್ರೇರಣೆಯಿಂದ ಮತಗಟ್ಟೆಯತ್ತ ತೆರಳುವ ವಾತಾವರಣವನ್ನು ತಾಲ್ಲೂಕು ಸ್ವೀಪ್ ಸಮಿತಿ ನಿರ್ಮಾಣ ಮಾಡುವಲ್ಲಿ ಉತ್ತಮ ಹೆಜ್ಜೆ ಇಟ್ಟಿದೆ ಎಂದರು. ಏ.5ರ ಶುಕ್ರವಾರ ವಿಕಲಚೇತನರಿಂದ ಬೈಕ್ ರ‍್ಯಾಲಿ ಹಾಗೂ ಮೇಣದ ಬತ್ತಿ ಬೆಳಗಿಸುವುದು, ಏ.6ರಂದು ಆಶಾ ಕಾರ್ಯಕರ್ತೆಯರಿಂದ ರಂಗೋಲಿ ಸ್ಪರ್ಧೆ, ಏ.8ಅಂಗನವಾಡಿ ಕಾರ್ಯಕರ್ತೆಯರಿಂದ ರಂಗೋಲಿಸ್ಪರ್ಧೆ, ಏ.12ರಂದುಎಚ್‌ಪಿಪಿಸಿಕಾಲೇಜುಆವರಣದಲ್ಲಿಯುವಮತದಾರರಿಂದ ರಂಗೋಲಿಸ್ಪರ್ಧೆ, ಏ.15ರ ಸೋಮವಾರ ಪ್ರಥಮ ದರ್ಜೆ ಕಾಲೇಜಿನ ಯುವ ಮತದಾರರಿಂದ ಪ್ರಬಂಧಸ್ಪರ್ಧೆ, ಏ.17ರಂದು ಸ್ವಸಹಾಯ ಸಂಘಗಳಿಂದ ರಂಗೋಲಿಸ್ಪರ್ಧೆ, ಏ.19ರಂದು ತಾಲ್ಲೂಕು ಮಟ್ಟದ ವಿವಿಧ ಅಧಿಕಾರಿಗಳಿಂದ ಪ್ರತಿಜ್ಞಾವಿಧಿ ಕಾರ್ಯಕ್ರಮವಿರುತ್ತದೆ.

## ಪ್ರಮುಖ ಸುದ್ದಿ

### ಕೈ ಅಭ್ಯರ್ಥಿ ಬಿ.ಎನ್. ಚಂದ್ರಪ್ಪ ಪ್ರಶ್ನೆ

# ಜಿಲ್ಲಾ ಕೇಂದ್ರಕ್ಕೆ 100 ಕಿ.ಮೀ. ಬೇಕೋ, 500 ಕಿ.ಮೀ ಅಭ್ಯರ್ಥಿ ಬೇಕೋ?

» ಹಿರಿಯೂರು

ಚಿತ್ರದುರ್ಗ ಕ್ಷೇತ್ರದಿಂದ ಲೋಕಸಭೆ ಚುನಾವಣೆಗೆ 100 ಕಿ.ಮೀ. ದೂರ ಇರುವ ಅಜ್ಜಂಪುರ ತಾಲ್ಲೂಕಿನ ನಾನು ಬೇಕೋ ಅಥವಾ 500 ಕಿಲೋ ಮೀಟರ್ ದೂರದಿಂದ ಬಂದು ಸ್ಪರ್ಧಿಸಿರುವ ಬಿಜೆಪಿ ಅಭ್ಯರ್ಥಿ ಬೇಕೋ? ಎಂಬುದನ್ನು ಮತದಾರರು ನಿರ್ಧರಿಸಲಿ ಎಂದು ಕಾಂಗ್ರೆಸ್ ಅಭ್ಯರ್ಥಿ ಬಿ.ಎನ್. ಚಂದ್ರಪ್ಪ ಹೇಳಿದರು.

ನಗರದ ಕಾಂಗ್ರೆಸ್ ಕಚೇರಿಯಲ್ಲಿ ಮಂಗಳವಾರಹಮ್ಮಿಕೊಂಡಿದ್ದಲೋಕಸಭಾ ಚುನಾವಣೆಯ ಕಾರ್ಯಕರ್ತರ ಸಭೆಯಲ್ಲಿ ಅವರು ಮಾತನಾಡಿದರು.

ನಾನು ಹಿಂದಿನ ಹತ್ತು ವರ್ಷಗಳಿಂದ ನಿಮ್ಮ ಮನೆಯ ಮಗನಂತೆ ಕೆಲಸ ಮಾಡಿಕೊಂಡು ಬಂದಿದ್ದೇನೆ. ನನ್ನ ರಾಜಕೀಯ ಬದುಕಿನಲ್ಲಿ ಯಾವುದೇ ಕಪ್ಪು ಚುಕ್ಕೆಯಿಲ್ಲ. ಭ್ರಷ್ಟಾಚಾರ, ಜಾತಿತಾರತಮ್ಯ ಆರೋಪಗಳಿಲ್ಲದೆ ಆಡಳಿತ ನಡೆಸಿಕೊಂಡು ಬಂದಿದ್ದೇನೆ.ಏಪ್ರಿಲ್ 4 ರಂದು ನಾಮಪತ್ರ ಸಲ್ಲಿಸುತ್ತಿದ್ದು,ನಮ್ಮ ಪಕ್ಷದ ಕಾರ್ಯಕರ್ತರು, ಅಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ, ವಿರೋಧ ಪಕ್ಷದವರಿಗೆ ನಮ್ಮ ಶಕ್ತಿ ತೋರಿಸಬೇಕು ಎಂದು ಚಂದ್ರಪ್ಪ ಮನವಿ ಮಾಡಿದರು.

ಜಿಲ್ಲಾ ಉಸ್ತುವಾರಿ ಸಚಿವ ಡಿ. ಸುಧಾಕರ್ ಮಾತನಾಡಿ, ಕಾಂಗ್ರೆಸ್ ಕಾರ್ಯಕರ್ತರು ಅತ್ಯಂತ ಜವಾಬ್ದಾರಿಯಿಂದ ಚುನಾವಣೆ ಎದುರಿಸುವಮೂಲಕನಮ್ಮಅಭ್ಯರ್ಥಿಯನ್ನ ಅತ್ಯಧಿಕ ಮತಗಳ ಅಂತರದಿಂದ ಗೆಲ್ಲುವಂತೆ ಶ್ರಮಿಸಬೇಕು. ಏ 5 ರಿಂದ ಖಂಡೇನಹಳ್ಳಿ ಭಾಗದಿಂದ ತಾಲ್ಲೂಕಿನಲ್ಲಿ ಚುನಾವಣಾ ಪ್ರಚಾರ ಆರಂಭಿಸುತ್ತೇವೆ. ನಮ್ಮ ಪಕ್ಷ ಜಾರಿಗೊಳಿಸಿರುವ ಗ್ಯಾರಂಟಿ ಯೋಜನೆಗಳೇ ಮತ ಪಡೆಯಲು ನಮಗೆ ಶ್ರೀರಕ್ಷೆಯಾಗಿದ್ದು, ಯೋಜನೆಗಳ ಹೆಸರಿನಲ್ಲಿ ಮತ ಯಾಚಿಸೋಣ ಎಂದು ಸೂಚಿಸಿದರು.ಜಿಲ್ಲೆಯಲ್ಲಿ ಗ್ಯಾರಂಟಿ ಯೋಜನೆಗಳಿಂದ ಶೇ 76 ರಷ್ಟು ಜನರು ನೆಮ್ಮದಿಯ ಬದುಕು ನಡೆಸುತ್ತಿರುವ ಬಗ್ಗೆ ಸಮೀಕ್ಷೆ ಮೂಲಕ ಸಿಎಂ ಮತ್ತು ಡಿಸಿಎಂ ಮಾಹಿತಿ ಪಡೆದುಕೊಂಡಿದ್ದಾರೆ. ತಂತಮ್ಮ ಬೂತುಗಳಲ್ಲಿನ ಸಫಲತೆ, ವಿಫಲತೆಗೆ ಮುಖಂಡರೇ ಹೊಣೆಯಾಗಬೇಕಾಗುತ್ತದೆ ಎಂದು ಸುಧಾಕರ್ ಎಚ್ಚರಿಸಿದರು.

ಮಾಜಿ ಶಾಸಕ ಎವಿ. ಉಮಾಪತಿ, ಜಿಎಸ್ ಮಂಜುನಾಥ್, ಕೆಪಿಸಿಸಿ ಸದಸ್ಯ ವಿಜಯ ಕುಮಾರ್, ಡಿಟಿ ಶ್ರೀನಿವಾಸ್, ಜಿಲ್ಲಾಧ್ಯಕ್ಷ ತಾಜ್ ಪೀರ್ ಮಾತನಾಡಿದರು. ಈ ಸಂದರ್ಭದಲ್ಲಿ ಮಾಜಿ ಜಿಪಂ ಅಧ್ಯಕ್ಷೆ ಗೀತಾ ನಂದಿನಿ ಗೌಡ, ಆರ್ ನಾಗೇಂದ್ರ ನಾಯ್ಕ,ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಖಾದಿ ರಮೇಶ್, ಈರಲಿಂಗೇಗೌಡ, ನಗರಸಭೆ ಮಾಜಿ ಅಧ್ಯಕ್ಷ ಟಿ. ಚಂದ್ರಶೇಖರ್, ಎಸ್. ಆರ್. ತಿಪ್ಪೇಸ್ವಾಮಿ, ಕಲ್ಲಹಟ್ಟಿ ತಿಪ್ಪೇಸ್ವಾಮಿ, ಸೂರಗೊಂಡನಹಳ್ಳಿ ಕೃಷ್ಣಮೂರ್ತಿ, ಕಲ್ಲಹಟ್ಟಿ ಹರೀಶ್, ಬಿಎನ್ ಪ್ರಕಾಶ್, ಶಿವರಂಜನಿ ಯಾದವ್ ಹಾಗೂ

ನಗರಸಭೆ ಸದಸ್ಯರು, ನೂರಾರು ಮುಖಂಡರು ಸೇರಿದಂತೆ ಮತ್ತಿತರರು ಭಾಗವಹಿಸಿದ್ದರು.



## ಫಾಸ್ಟ್ ನ್ಯೂಸ್

### ಮತದಾನ ಕಾರ್ಯ ಸಿಬ್ಬಂದಿ ನೇಮಕ

» ಚಿತ್ರದುರ್ಗ

ಲೋಕಸಭೆ ಸಾರ್ವತ್ರಿಕ ಚುನಾವಣೆ-2024ಗೆ ಜಿಲ್ಲೆಯಲ್ಲಿ ಏಪ್ರಿಲ್ 26 ರಂದು ಮತದಾನ ಜರುಗಲಿದೆ. ಈ ಹಿನ್ನಲೆಯಲ್ಲಿ ಮತದಾನ ಕಾರ್ಯಕ್ಕೆ ಸಿಬ್ಬಂದಿ ನೇಮಕ ಮಾಡಿ ಆದೇಶ ಹೊರಡಿಸಲಾಗಿದೆಎಂದುಜಿಲ್ಲಾಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ತಿಳಿಸಿದ್ದಾರೆ. ಮತದಾನ ಕಾರ್ಯದ ಚುನಾವಣಾ ಕರ್ತವ್ಯದಿಂದ ವಿನಾಯಿತಿ ಅಥವಾ ಬದಲಾವಣೆ ಕೋರಿ ಬರುವ ಯಾವುದೇಮನವಿಗಳನ್ನುಪರಿಗಣಿಸಲಾಗುವುದಿಲ್ಲ. ಅನಿವಾರ್ಯ ಕಾರಣಗಳಿಂದ ವಿನಾಯಿತಿ ಅಥವಾ ಬದಲಾವಣೆ ಕೋರುವ ಸಿಬ್ಬಂದಿಗಳು ಜಿಲ್ಲಾ ಮಟ್ಟದ ಪರಿಶೀಲನಾ ಸಮಿತಿಯ ಮುಂದೆ ಪೂರಕ ಹಾಗೂ ಸಮರ್ಪಕವಾದ ದಾಖಲೆಗಳೊಂದಿಗೆ ಖುದ್ದಾಗಿ ಹಾಜರಾಗಿ ತಮ್ಮ ಅಹವಾಲುಗಳನ್ನು ಸಲ್ಲಿಸಬೇಕು. ಯಾವುದೇ ಕಾರಣ ನೀಡದೆ ಮತದಾನ ಕಾರ್ಯನಿರ್ವಹಿಸಿದ್ದಲ್ಲಿ ಕರ್ತವ್ಯ ಲೋಪವೆಂದು ಗಂಭೀರವಾಗಿ ಪರಿಗಣಿಸಿ ಪ್ರಜಾಪ್ರಾತಿನಿಧ್ಯ ಕಾಯ್ದೆ 1951 ಶಿಸ್ತು ಕ್ರಮ ಕೈಗೊಳ್ಳುವುದಾಗಿ ಜಿಲ್ಲಾಧಿಕಾರಿ ಟಿ. ವೆಂಕಟೇಶ್ ಎಚ್ಚರಿಕೆ ನೀಡಿದ್ದಾರೆ.

### ಚಿತ್ರದುರ್ಗ ಲೋಕಸಭಾ ಚುನಾವಣೆ: ಏ.02ರಂದು ಎರಡು ನಾಮಪತ್ರ ಸಲ್ಲಿಕೆ

» ಚಿತ್ರದುರ್ಗ

ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಚುನಾವಣೆಗೆ ಏಪ್ರಿಲ್ 02 ಮಂಗಳವಾರದಂದು ಇಬ್ಬರು ಅಭ್ಯರ್ಥಿಗಳು ಜಿಲ್ಲಾ ಚುನಾವಣಾಧಿಕಾರಿ ಟಿ.ವೆಂಕಟೇಶ್ ಅವರಿಗೆ ಜಿಲ್ಲಾಧಿಕಾರಿಗಳ ಕಚೇರಿಯ ಚುನಾವಣಾಧಿಕಾರಿಗಳ ಕಾರ್ಯಾಲಯದಲ್ಲಿ ನಾಮಪತ್ರ ಸಲ್ಲಿಸಿದರು. ಬಹುಜನ ಸಮಾಜ ಪಾರ್ಟಿಯ ಅಭ್ಯರ್ಥಿಯಾಗಿ ಅಶೋಕ ಚಕ್ರವರ್ತಿ, ಕರ್ನಾಟಕ ರಾಷ್ಟ್ರ ಸಮಿತಿ ಪಕ್ಷದ ಅಭ್ಯರ್ಥಿಯಾಗಿ ಬಿ.ವೆಂಕಟೇಶ್ ಅವರು ಉಮೇದುವಾರಿಕೆ ಸಲ್ಲಿಸಿದರು. ಚಿತ್ರದುರ್ಗ ಲೋಕಸಭಾ ಕ್ಷೇತ್ರಕ್ಕೆ ಇದುವರೆಗೆ ಒಟ್ಟು 5 ಅಭ್ಯರ್ಥಿಗಳಿಂದ 8 ನಾಮಪತ್ರ ಸಲ್ಲಿಕೆಯಾಗಿರುತ್ತದೆ. ಏಪ್ರಿಲ್ 04 ನಾಮಪತ್ರ ಸಲ್ಲಿಸಲು ಕಡೆಯ ದಿನವಾಗಿದೆ.

### ಏ.05ರಂದು ಡಾ.ಬಾಬು ಜಗಜೀವನರಾಂರವರ 117ನೇ ಜನ್ಮ ದಿನಾಚರಣೆ

» ಚಿತ್ರದುರ್ಗ

ಚಿತ್ರದುರ್ಗ ನಗರದ ಜಿಲ್ಲಾ ಪಂಚಾಯತ್ ಕಚೇರಿ ಸಭಾಂಗಣದಲ್ಲಿ ಇದೇ ಏಪ್ರಿಲ್ 05ರಂದು ಬೆಳಿಗ್ಗೆ 10ಕ್ಕೆ ಡಾ.ಬಾಬು ಜಗಜೀವನರಾಂ ಅವರ 117ನೇ ಜನ್ಮ ದಿನಾಚರಣೆ ಹಮ್ಮಿಕೊಳ್ಳಲಾಗಿದೆ. ಲೋಕಸಭಾ ಸಾರ್ವತ್ರಿಕ ಚುನಾವಣಾ ಮಾದರಿ ನೀತಿ ಸಂಹಿತೆ ಜಾರಿಯಲ್ಲಿರುವ ಹಿನ್ನಲೆಯಲ್ಲಿ ಜಯಂತಿ ಕಾರ್ಯಕ್ರಮವನ್ನು ಸರಳವಾಗಿ ಆಚರಿಸಲಾಗುವುದು. ಜಯಂತಿಗೆ ಜಿಲ್ಲಾ ಮತ್ತು ತಾಲ್ಲೂಕುಮಟ್ಟದ ಅಧಿಕಾರಿಗಳು, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಇತರೆ ಸಮುದಾಯಗಳ ಮುಖಂಡರು, ಸಂಘಟನೆಗಳ ಪದಾಧಿಕಾರಿಗಳು, ಸಾರ್ವಜನಿಕರು ಹಾಜರಾಗಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕು ಎಂದು ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ಜಗದೀಶ್ ಹೆಬ್ಬಳ್ಳಿ ತಿಳಿಸಿದ್ದಾರೆ.

### ಚೆಕ್‌ಪೋಸ್ಟ್‌ಗಳಲ್ಲಿ ವಾಹನ ತಪಾಸಣೆ

» ಚಿತ್ರದುರ್ಗ

ಚಿತ್ರದುರ್ಗ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ವಿವಿಧ ಚೆಕ್‌ಪೋಸ್ಟ್‌ಗಳಿಗೆ ಚಿತ್ರದುರ್ಗ ತಹಶೀಲ್ದಾರ್ ಡಾ.ನಾಗವೇಣಿ ಮಂಗಳವಾರ ಭೇಟಿ ನೀಡಿ, ವಾಹನಗಳ ತಪಾಸಣೆ ನಡೆಸಿದರು. ಚಿತ್ರದುರ್ಗ ವಿಧಾನಸಭಾ ಕ್ಷೇತ್ರದ ವಡ್ಡರ ಪಾಳ್ಯ ಚೆಕ್‌ಪೋಸ್ಟ್, ತಿರುಮಲ ಡಾಬಾ ಚೆಕ್‌ಪೋಸ್ಟ್, ಕ್ಯಾದಿಗೆರೆ, ಕೆಳಗಳಹಟ್ಟಿ ಚೆಕ್‌ಪೋಸ್ಟ್‌ಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಈ ಸಂದರ್ಭದಲ್ಲಿ ಎಸ್‌ಎಸ್‌ಟಿ ತಂಡದ ರವಿಕುಮಾರ್, ಕಂದಾಯ ನಿರೀಕ್ಷಕ ಮೋಹನ್ ಕುಮಾರ್, ಗ್ರಾಮ ಆಡಳಿತಾಧಿಕಾರಿ ಮಮತಾ, ಚುನಾವಣಾ ವಿಷಯ ನಿರ್ವಾಹಕ ನವೀನ್ ಕುಮಾರ್ ಇದ್ದರು.

### ಹರಿಹರ ನಗರಸಭೆ ವ್ಯಾಪ್ತಿಯಲ್ಲಿ ತುಂಗಭದ್ರಾ ನದಿ ನೀರು

» ದಾವಣಗೆರೆ

ಹರಿಹರ ನಗರಕ್ಕೆ ಕುಡಿಯುವ ನೀರು ಪೂರೈಕೆಯಾಗುವ ಕವಲೆತ್ತು ಗ್ರಾಮದ ಹತ್ತಿರ ತುಂಗಭದ್ರ ನದಿಯ ಜಾಕ್‌ವೆಲ್‌ಗೆ ನೀರು ಬಂದಿದ್ದು, ನದಿಯ ನೀರನ್ನು ಏಪ್ರಿಲ್ 3 ರಿಂದ ಬೆಳಿಗ್ಗೆ 6 ಗಂಟೆಯಿಂದ, 24*7 ನಿರಂತರ ಕುಡಿಯುವ ನೀರು ಸರಬರಾಜು ಯೋಜನೆಯಡಿ ನೀರು ಬಿಡಲಾಗುತ್ತದೆ.

ಸಾರ್ವಜನಿಕರು ಈ ನೀರನ್ನು ಕಡ್ಡಾಯವಾಗಿ ಕುದಿಸಿ-ಆರಿಸಿದ ಕುಡಿಯಬೇಕು ಎಂದು ಹರಿಹರ ನಗರಸಭೆ ಪೌರಾಯುಕ್ತರು ತಿಳಿಸಿದ್ದಾರೆ.

# ರಾಜ್ಯಕ್ಕೆ ಕೇಂದ್ರದಿಂದ ಮಲತಾಯಿ ಧೋರಣೆ

» ಚಿತ್ರದುರ್ಗ



ಮಲತಾಯಿ ಧೋರಣೆ ಮೂಲಕ ರಾಜ್ಯಕ್ಕೆ ಅನ್ಯಾಯವೆಸಗುತ್ತಿರುವ ಕೇಂದ್ರದ ಕೋಮುವಾದಿ ಬಿಜೆಪಿ.ಯನ್ನು ಈ ಬಾರಿಯ ಲೋಕಸಭಾ ಚುನಾವಣೆಯಲ್ಲಿ ಅಧಿಕಾರದಿಂದ ಓಡಿಸಬೇಕೆಂದು ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಕಾರ್ಯಕರ್ತರುಹಾಗೂಮುಖಂಡುಗಳಲ್ಲಿ ಮನವಿ ಮಾಡಿದರು.

ಉಮಾಪತಿ ಕಲ್ಯಾಣ ಮಂಟಪದಲ್ಲಿ ಮಂಗಳವಾರ ನಡೆದ ಚಿತ್ರದುರ್ಗ ಲೋಕಸಭಾ ಕ್ಷೇತ್ರ ಮಟ್ಟದ ಕಾಂಗ್ರೆಸ್ ಪದಾಧಿಕಾರಿಗಳು ಮತ್ತು ಮುಖಂಡರ ಪೂರ್ವಭಾವಿ ಸಭೆಯಲ್ಲಿ ಭಾಗವಹಿಸಿ ಮಾತನಾಡಿದರು.

ಇದೆ ತಿಂಗಳ 26 ರಂದು ನಡೆಯುವ ಲೋಕಸಭೆ ಚುನಾವಣೆ ಪ್ರತಿಷ್ಠೆಯ ಚುನಾವಣೆಯಾಗಿದೆ. ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗ, ಹಿಂದುಳಿದವರು, ಅಲ್ಪಸಂಖ್ಯಾತರಿಗೆ ಕೇಂದ್ರ ಬಿಜೆಪಿ. ಸರ್ಕಾರ ಕಳೆದ ಹತ್ತು ವರ್ಷಗಳಿಂದಲೂ ಅನ್ಯಾಯ ಮಾಡಿಕೊಂಡು ಬರುತ್ತಿದೆ. 2019 ರಲ್ಲಿ ನಡೆದ ಚುನಾವಣೆಯಲ್ಲಿ ರಾಜ್ಯದಿಂದ ಗೆದ್ದು ಹೋಗಿರುವ ಯಾವೊಬ್ಬ ಬಿಜೆಪಿ. ಸಂಸದರೂ ಪಾರ್ಲಿಮೆಂಟ್‌ನಲ್ಲಿ ರಾಜ್ಯದ ಅಭಿವೃದ್ದಿ ಕುರಿತು ಮಾತನಾಡಿಲ್ಲ. ಭದ್ರಾಮೇಲ್ದಂಡೆ ಯೋಜನೆಗೆ ಐದು ಸಾವಿರದ ಮುನ್ನೂರು ಕೋಟಿ ರೂ.ಗಳನ್ನು ಘೋಷಿಸಿರುವ ಕೇಂದ್ರ ಸರ್ಕಾರ ಇದುವರೆವಿಗೂ ನಯಾ ಪೈಸೆಯನ್ನು ಬಿಡುಗಡೆಗೊಳಿಸಿಲ್ಲ. ಎಸ್ಸಿ. ಎಸ್ಟಿ, ಅಲ್ಪಸಂಖ್ಯಾತರು, ಹಿಂದುಳಿದವರ ಪರವಾಗಿರುವ ಕಾಂಗ್ರೆಸ್ ಪಕ್ಷವನ್ನು ಈ ಸಾರಿ ಕೇಂದ್ರದಲ್ಲಿ ಅಧಿಕಾರಕ್ಕೆ ತರಬೇಕಾಗಿರುವುದರಿಂದ ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಅಭ್ಯರ್ಥಿ ಬಿ.ಎನ್. ಚಂದ್ರಪ್ಪನವರನ್ನು ಬಹುಮತಗಳಿಂದ ಗೆಲ್ಲಿಸುವಂತೆ ವಿನಂತಿಸಿದರು.

ಮಾಜಿ ಸಚಿವ ಹೆಚ್.ಆಂಜನೇಯ ಮಾತನಾಡಿ ಎಲ್ಲಾ ಜಾತಿ ಧರ್ಮದವರನ್ನೊಳಗೊಂಡಿರುವ ದೇಶ ನಮ್ಮದು. ಜಾತಿ ಧರ್ಮಗಳ ವಿರುದ್ದ ವಿಷ ಬೀಜ ಬಿತ್ತುತ್ತಿರುವ ಪ್ರಧಾನಿ ಮೋದಿ ಹಾಗೂ ಬಿಜೆಪಿ.ಯ ಯಾವೊಬ್ಬ ಕಾರ್ಯಕರ್ತನಿಗೂ ಪಾರ್ಲಿಮೆಂಟ್ ಚುನಾವಣೆಯಲ್ಲಿ ಮತ ಕೇಳುವ ನೈತಿಕತೆಯಿಲ್ಲ. ವಿಧಾನಸಭೆ ಚುನಾವಣೆ ಮುನ್ನ ಸಿದ್ದರಾಮಯ್ಯನವರು ಘೋಷಿಸಿದ ಐದು ಗ್ಯಾರೆಂಟಿಗಳನ್ನು ರಾಜ್ಯದಲ್ಲಿ ಪಕ್ಷ ಅಧಿಕಾರಕ್ಕೆ ಬಂದ ಕೂಡಲೆ ಈಡೇರಿಸಿದ್ದಾರೆ. ಕಾಯಕರ್ತರು ಪ್ರತಿ ಬೂತ್‌ನಲ್ಲಿ ಮನೆ ಮನೆಗೆ ಹೋಗಿ ಕಾಂಗ್ರೆಸ್ ಪಕ್ಷದ ಯೋಜನೆಗಳನ್ನು ಜನತೆಗೆ ತಿಳಿಸಿ ಕಾಂಗ್ರೆಸ್ ಅಭ್ಯರ್ಥಿ ಬಿ.ಎನ್.ಚಂದ್ರಪ್ಪನವರನ್ನು ಅತ್ಯಧಿಕ ಮತಗಳಿಂದ ಗೆಲ್ಲಿಸಿ ಪಾರ್ಲಿಮೆಂಟ್‌ಗೆ ಕಳಿಸಿಕೊಡಬೇಕೆಂದು ಕೋರಿದರು.

ಜಾತಿ ಧರ್ಮದ ಬಗ್ಗೆ ನಾವುಗಳು ಮಾತನಾಡುವ ಅವಶ್ಯಕತೆಯಿಲ್ಲ. ಕಾಂಗ್ರೆಸ್ ಎಲ್ಲಾ ಜಾತಿ ಧರ್ಮದವರಿಗೂ ಸೌಲಭ್ಯ ನೀಡಿದೆ. ಪಕ್ಷದ ಸಾಧನೆ ಮೇಲೆ ಮತ ಕೇಳೋಣ. ಎಲ್ಲಾ ಕಾರ್ಯಕರ್ತರ ಹಾಗೂ ಮುಖಂಡರುಗಳ ಹೃದಯ ಗೆದ್ದಿರುವ ಸಂಪನ್ನ ಸರಳ ಸಜ್ಜನಿಕೆಯ ರಾಜಕಾರಣಿ ಬಿ.ಎನ್.ಚಂದ್ರಪ್ಪನವರನ್ನು ಪಾರ್ಲಿಮೆಂಟ್ ಚುನಾವಣೆಯಲ್ಲಿ ಗೆಲ್ಲಿಸಲೇಬೇಕಾಗಿರುವುದರಿಂದ ಕಾರ್ಯಕರ್ತರು ಪ್ರಾಮಾಣಿಕವಾಗಿ ಕೆಲಸ ಮಾಡುವಂತೆ ಹೇಳಿದರು.

ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿ ಅಸಂಘಟಿತ ಕಾರ್ಮಿಕ ವಿಭಾಗದ ಅಧ್ಯಕ್ಷ ಜಿ.ಎಸ್.ಮಂಜುನಾಥ್ ಮಾತನಾಡಿ ಪ್ರಧಾನಿ ಮೋದಿ ಪೇಪರ್ ಟೈಗರ್ ಆಗುತ್ತಿದ್ದಾರೆ. ಆದರೂ ಅವರ ಟೀಕೆಗಳಿಗೆ ಕಾಂಗ್ರೆಸ್‌ನಲ್ಲಿ ಉತ್ತರ ಕೊಡಲು ಯಾರು ಸಿದ್ದರಿಲ್ಲ. ರಾಜ್ಯ ಸರ್ಕಾರ ನೀಡಿರುವ ಐದು ಗ್ಯಾರೆಂಟಿಗಳನ್ನು ಪ್ರತಿ ಮನೆ ಮನೆಗೆ ತಿಳಿಸುವ ಜವಾಬ್ದಾರಿ ಕಾರ್ಯಕರ್ತರುಗಳ ಮೇಲಿದೆ. ಈ ಚುನಾವಣೆಯಲ್ಲಿ ಕಾಂಗ್ರೆಸ್ ಮಿತ್ರ ಪಕ್ಷಗಳು ಗೆದ್ದರೆ ರೈತರ ಸಂಪೂರ್ಣ ಸಾಲ ಮನ್ನಾ ಆಗಲಿದೆ. ಭಾರತ ದೇಶ ದಲಿತರು, ಹಿಂದುಳಿದವರು, ಅಲ್ಪಸಂಖ್ಯಾತರು, ಎಸ್ಸಿ. ಎಸ್ಟಿ.ಗಳ ಮೇಲೆ ನಿಂತಿದೆ. ಅದಾನಿ ಅಂಬಾನಿ ಮೇಲಲ್ಲ. ಧರ್ಮ ಜಾತಿಗಳ ಮಧ್ಯೆ ಸಂಘರ್ಷ ಉಂಟು ಮಾಡುತ್ತಿರುವ ಬಿಜೆಪಿ. ಈ ಸಾರಿಯೂ ಕೇಂದ್ರದಲ್ಲಿ ಅಧಿಕಾರಕ್ಕೆ ಬಂದರೆ ಸಂವಿಧಾನ ಉಳಿಯಲ್ಲ. ಮನುವಾದ ಬರುತ್ತದೆ. ಇದರಿಂದ ನಮ್ಮ ಮುಂದಿನ ಪೀಳಿಗೆಯ ಮಕ್ಕಳು ತೊಂದರೆ ಅನುಭವಿಸಬೇಕಾಗುತ್ತದೆನ್ನುವುದನ್ನು ಮನದಲ್ಲಿಟ್ಟುಕೊಂಡು ಚುನಾವಣೆಯಲ್ಲಿ ಕಾರ್ಯಕರ್ತರು ಮುಖಂಡರುಗಳು ಕಾಂಗ್ರೆಸ್ ಅಭ್ಯರ್ಥಿ ಪರ ಕೆಲಸ ಮಾಡಬೇಕಿದೆ ಎಂದರು.

ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಬಿ.ಎನ್.ಚಂದ್ರಪ್ಪ ಮಾತನಾಡಿ 2014 ರಲ್ಲಿ ಚಿತ್ರದುರ್ಗ ಲೋಕಸಭಾ ಕ್ಷೇತ್ರದಿಂದ ನಾನು ಸ್ಪರ್ಧಿಸಿದಾಗ ಮತದಾರರು ನನ್ನ ಮೇಲೆ ವಿಶ್ವಾಸ ನಂಬಿಕೆಯಿಟ್ಟು ಒಂದು ಲಕ್ಷ ಎರಡು ಸಾವಿರ ಮತಗಳ ಅಂತರದಿಂದ ಗೆಲ್ಲಿಸಿದ್ದೀರಿ. ಐದು ವರ್ಷಗಳ ಕಾಲ ಎಲ್ಲಿಯೂ ನಿಮಗೆ ಅಪಮಾನವಾಗುವಂತೆ ನಡೆದುಕೊಂಡಿಲ್ಲ.

2019 ಚುನಾವಣೆಯಲ್ಲಿ ಮತ್ತೆ ಸ್ಪರ್ಧಿಸಿ ಸೋತಾಗ ಕ್ಷೇತ್ರದ ಮತದಾರರಿಗೆ ಬೆನ್ನು ತೋರಿಸಿ ಓಡಿ ಹೋಗಲಿಲ್ಲ. ಪ್ರತಿ ಹಳ್ಳಿ ಹಳ್ಳಿಗಳಲ್ಲಿ ಸುತ್ತಾಡಿ ಮನೆ ಮಗನಂತೆ ಕೆಲಸ ಮಾಡಿದ್ದೇನೆ. ಸುಮಾರು 26 ಆಕಾಂಕ್ಷಿಗಳಿದ್ದರೂ ಕಾಂಗ್ರೆಸ್ ವರಿಷ್ಠ ಮಂಡಳಿ ಅಳೆದು ತೂಗಿ ನನ್ನನ್ನು ಉಮೇದುವಾರನನ್ನಾಗಿ ಕಣಕ್ಕಿಳಿಸಿದೆ. ಪ್ರತಿಯೊಬ್ಬ ಕಾರ್ಯಕರ್ತರು ಅಭ್ಯರ್ಥಿಯಾಗಿ ಕೆಲಸ ಮಾಡಿ ಗೆಲ್ಲಿಸಿ ಮತ್ತೆ ನಿಮ್ಮಗಳ ಸೇವೆ ಮಾಡಲು ಅವಕಾಶ ನೀಡಿ ಎಂದು ಮನವಿ ಮಾಡಿದರು.

ಐದು ನೂರು ಕಿ.ಮೀ.ದೂರದಿಂದ ಬಂದಿರುವ ಬಿಜೆಪಿ.ಯ ಗೋವಿಂದ ಕಾರಜೋಳರಿಂದ ಜಿಲ್ಲೆಯ ಅಭಿವೃದ್ದಿ ಹೇಗೆ ಸಾಧ್ಯ ಎನ್ನುವುದನ್ನು ಮತದಾರರು ಆತ್ಮಾವಲೋಕನ ಮಾಡಿಕೊಳ್ಳಬೇಕಿದೆ. ಮೊದಲ ಬಾರಿಗೆ ನಾನು ಗೆದ್ದಾಗ ಸಂಸದ ಎನ್ನುವ ಪಿತ್ತ ನೆತ್ತಿಗೇರಿಸಿಕೊಳ್ಳದೆ ಕೆಲಸ ಮಾಡಿದ್ದೇನೆ. ಅಧಿಕಾರ ಸುಖದ ಸುಪ್ಪತ್ತಿಗೆಯಲ್ಲಿ ಮುಳ್ಳಿನ ಹಾಸಿಗೆ. ಯಾವಾಗಲೂ ಚುಚ್ಚುತ್ತಿರುತ್ತದೆ. ಅಪಾಯದಲ್ಲಿರುವ ಸಂವಿಧಾನವನ್ನು ಉಳಿಸಬೇಕಾಗಿರುವುದರಿಂದ ಈ ಬಾರಿ ಕೇಂದ್ರದಲ್ಲಿ ಕಾಂಗ್ರೆಸ್ ಪಕ್ಷವನ್ನು ಅಧಿಕಾರಕ್ಕೆ ತರಲೇಬೇಕು. ನಾಲ್ಕು ನೂರು ಸ್ಥಾನಗಳನ್ನು ಗೆಲ್ಲುತ್ತೇವೆಂದು ಬಿಜೆಪಿ. ಹೇಳುತ್ತಿದೆ. ಜಾತಿ ಧರ್ಮಗಳ ನಡುವೆ ವೈಷಮ್ಯ ಬಿತ್ತುತ್ತಿರುವ ಕೋಮುವಾದಿ ಬಿಜೆಪಿ.ಯಿಂದ ದೇಶದ ಜನ ಭ್ರಮನಿರಸನಗೊಂಡಿದ್ದಾರೆ. ಹಾಗಾಗಿ ಈ ಬಾರಿಯ ಲೋಕಸಭೆ ಚುನಾವಣೆಯಲ್ಲಿ ಆಶ್ಚರ್ಯಕರ ರೀತಿಯ ಫಲಿತಾಂಶ ಬರಲಿದೆ. ಗುರುವಾರ ನಾಮಪತ್ರ ಸಲ್ಲಿಸುತ್ತಿದ್ದು, ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ಅನೇಕ ನಾಯಕರುಗಳು ಆಗಮಿಸಲಿದ್ದಾರೆ. ಕಾರ್ಯಕರ್ತರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸುವಂತೆ ಕೋರಿದರು.

ಭೀಮಸಮುದ್ರದ ಜಿ.ಎಸ್. ಮಂಜುನಾಥ್, ಮಾಜಿ ಶಾಸಕ ಎ.ವಿ.ಉಮಾಪತಿ, ದ್ರಾಕ್ಷಾ ರಸ ಮಂಡಳಿ ಅಧ್ಯಕ್ಷ ಬಿ.ಯೋಗೇಶ್‌ಬಾಬು, ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಆರ್. ಕೃಷ್ಣಮೂರ್ತಿ, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಎಂ.ಕೆ.ತಾಜ್‌ಪೀರ್, ಕೆ.ಡಿ.ಪಿ. ಸದಸ್ಯ ಕೆ.ಸಿ.ನಾಗರಾಜ್, ಚಿತ್ರದುರ್ಗ ನಗರಾಭಿವೃದ್ದಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಆರ್.ಕೆ.ಸರ್ದಾರ್, ಜಿಲ್ಲಾ ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ಗೀತ ನಂದಿನಿಗೌಡ, ಹನುಮಲಿ ಷಣ್ಮುಖಪ್ಪ ಇವರುಗಳು ಮಾತನಾಡಿದರು.

ಜಿಲ್ಲಾ ಕಾಂಗ್ರೆಸ್ ಉಪಾಧ್ಯಕ್ಷರುಗಳಾದ ನಜ್ಮತಾಜ್, ಡಿ.ಟಿ.ವೆಂಕಟೇಶ್, ಎಸ್.ಎನ್.ರವಿಕುಮಾರ್, ಪ್ರಧಾನ ಕಾರ್ಯದರ್ಶಿಗಳಾದ ಕೆ.ಪಿ.ಸಂಪತ್‌ಕುಮಾರ್, ಡಿ.ಎನ್. ಮೈಲಾರಪ್ಪ, ಚಿತ್ರದುರ್ಗ ನಗರಾಭಿವೃದ್ದಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಬಿ.ಟಿ.ಜಗದೀಶ್, ಗ್ಯಾರೆಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಆರ್.ಶಿವಣ್ಣ, ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷೆ ಶಶಿಕಲಾ ಸುರೇಶ್‌ಬಾಬು, ನಗರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಯು.ಲಕ್ಷ್ಮಿಕಾಂತ್, ಗ್ರಾಮಾಂತರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಆರ್.ಪ್ರಕಾಶ್, ಹಿಂದುಳಿದ ವರ್ಗಗಳ ವಿಭಾಗದ ಅಧ್ಯಕ್ಷ ಆರ್.ಪ್ರಕಾಶ್, ಸೇವಾದಳದ ಭೂತೇಶ್, ಶ್ರೀಮತಿ ಮೋಕ್ಷರುದ್ರಸ್ವಾಮಿ, ಮುನಿರಾ ಮಕಾಂದಾರ್, ಆರತಿ ಮಹಡಿ ಶಿವಮೂರ್ತಿ, ರುದ್ರಾಣಿ ಗಂಗಾಧರ್, ಮೆಹಬೂಬ್ ಖಾತೂನ್, ಜಮೀರ್, ಕೃಷ್ಣಪ್ಪ, ಶಬ್ಬೀರ್ ಅಹಮದ್, ಸೈಯದ್ ಖುದ್ದೂಸ್, ನ್ಯಾಯವಾದಿ ಸುದರ್ಶನ್, ಎಸ್ಸಿ. ವಿಭಾಗದ ಅಧ್ಯಕ್ಷ ಜಯಣ್ಣ, ಅಸಂಘಟಿತ ಕಾರ್ಮಿಕ ವಿಭಾಗದ ಅಧ್ಯಕ್ಷ ಮೋಹನ್ ಪೂಜಾರಿ, ಉಪಾಧ್ಯಕ್ಷ ಎಲ್.ಬಿ.ರಾಜಪ್ಪ ಕೆಂಗುಂಟೆ, ಜಿ.ಪಂ.ಸದಸ್ಯ ಅನಂತ್, ಅಲ್ಲಾಭಕ್ಷಿ, ಬಾಲಕೃಷ್ಣಸ್ವಾಮಿ, ಕಾರೆಹಳ್ಳಿ ಉಲ್ಲಾಸ್, ಸ್ವಾಮಿ, ಪ್ರಕಾಶ್ ರಾಮನಾಯ್ಕ ಇನ್ನು ಮುಂತಾದವರು ವೇದಿಕೆಯಲ್ಲಿದ್ದರು.

# ಪ್ರಖರ ಬಿಸಿಲಿನಿಂದ ರಕ್ಷಣೆ: ಮಾರ್ಗಸೂಚಿ ಬಿಡುಗಡೆ

» ಚಿತ್ರದುರ್ಗ

ಪ್ರಸ್ತುತ ಬೇಸಿಗೆಯಲ್ಲಿ ಜಿಲ್ಲೆಯಾದ್ಯಂತ ಮಧ್ಯಾಹ್ನ 12 ಗಂಟೆಯಿಂದ ಸಂಜೆ 03 ಗಂಟೆಯವರೆಗೆ ಪ್ರಖರವಾದ ಬಿಸಿಲು ಕಂಡುಬರುತ್ತಿರುವ ಹಿನ್ನಲೆಯಲ್ಲಿ ತಾಯಂದಿರು, ವಯೋವೃದ್ದರು ಮತ್ತು ಚಿಕ್ಕ ಮಕ್ಕಳು ಅನಾವಶ್ಯಕವಾಗಿ ಮನೆಯಿಂದ ಹೊರಗಡೆ ಬರದಂತೆ, ಮನೆಯಲ್ಲಿಯೇ ಇರಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ರೇಣುಪ್ರಸಾದ್ ವಿನಂತಿಸಿದ್ದಾರೆ.ತುರ್ತು ಸಂದರ್ಭಗಳಲ್ಲಿ ಅಥವಾ ಮನೆಯಿಂದ ಹೊರಗಡೆ ಬರಬೇಕಾದ ಅನಿವಾರ್ಯತೆ ಇದ್ದಾಗ ನೀರಿನ ಬಾಟಲ್ ಹಾಗೂ ಛತ್ರಿ ಮತ್ತು ಮಕ್ಕಳಿಗೆ ಆದಷ್ಟು ತಲೆಯ ಮೇಲೆ ನೀರಿನಿಂದ ಒದ್ದೆ ಮಾಡಿದ ಬಟ್ಟೆಯನ್ನು ಹಾಕುವುದಕ್ಕೆ ಆದ್ಯತೆ ನೀಡಬೇಕು. ಆದಷ್ಟು ನೆರಳಿನಲ್ಲಿ ಇರುವಂತೆ ಗಮನ ಹರಿಸಬೇಕು, ಇಲಾಖೆ ಹೊರಡಿಸಿರುವ ಮಾರ್ಗಸೂಚಿಗಳನ್ನು ತಪ್ಪದೇ ಪಾಲಿಸುವಂತೆ ತಿಳಿಸಿದ್ದಾರೆ.




**ಹೆಚ್ಚು ನೀರು ಕುಡಿಯುವುದು:** ಬಾಯಾರಿಕೆ ಇಲ್ಲದಿದರೂ ಸಹ ಹೆಚ್ಚು ನೀರನ್ನು ಆಗಾಗ ಕುಡಿಯಬೇಕು. ಬಾಯಾರಿಕೆಯು ನಿರ್ಜಲೀಕರಣದ ಲಕ್ಷಣವಾಗಿದೆ. ಪ್ರಯಾಣ ಮಾಡುವ ಸಮಯದಲ್ಲಿ ಸಹ ಕುಡಿಯುವ ನೀರನ್ನು ಜೊತೆಗೆ ತೆಗೆದುಕೊಂಡು ಹೋಗುವುದು ಅಗತ್ಯವಾಗಿದೆ. ಓಆರ್‌ಎಸ್ ಜೀವಜಲವನ್ನು ಹಾಗೂ ಮನೆಯಲ್ಲಿಯೇ ಸಿದ್ದಪಡಿಸಿದ ನಿಂಬೆ ಹಣ್ಣಿನ ಶರಬತ್ತು, ಮಜ್ಜಿಗೆ, ಲಸ್ಸಿ, ಹಣ್ಣಿನ ಜ್ಯೂಸ್‌ಗಳನ್ನು ಒಂದು ಚಿಟಿಕೆ ಉಪ್ಪಿನೊಂದಿಗೆ ಸೇವಿಸುವುದು ಉತ್ತಮವಾಗಿದೆ.

ಪ್ರಸ್ತುತ ಋತುಮಾನದ ಹಣ್ಣುಗಳಾದ ಕಲ್ಲಂಗಡಿ, ಕರ್ಬೂಜ, ಕಿತ್ತಳೆ, ದ್ರಾಕ್ಷಿ ಅನಾನಸ್ ಹಾಗೂ ಸೌತೆಕಾಯಿ, ಎಳೆನೀರು ಕಾಯಿ ಹೆಚ್ಚು ಸೇವಿಸಬೇಕು. ತಿಳಿ ಬಿಳಿ ಬಣ್ಣದ ಸಡಿಲವಾದ ಹತ್ತಿಯ ಬಟ್ಟೆಯನ್ನು ಧರಿಸುವುದು ಉತ್ತಮ. ನಡೆಯುವಾಗ ಪಾದರಕ್ಷೆ, ಚಪ್ಪಲಿ ತಪ್ಪದೆ ಧರಿಸಬೇಕು.

**ಇವುಗಳನ್ನು ಮಾಡಬಾರದು:** ಬಿಸಿಲಿನಲ್ಲಿ ಆದಷ್ಟು ಹೊರಹೋಗುವುದನ್ನು ತಪ್ಪಿಸಿ. ಮಧ್ಯಾಹ್ನದ ಸಂದರ್ಭದಲ್ಲಿ ಶ್ರಮದಾಯಕ ಹೊರಾಂಗಣ ಚಟುವಟಿಕೆಗಳನ್ನು ಕೈಗೊಳ್ಳಬಾರದು. ಚಪ್ಪಲಿ ಧರಿಸದೆ ಹೊರಹೋಗಬಾರದು. ಮದ್ಯಪಾನ, ಟೀ, ಕಾಫಿ, ಹೆಚ್ಚು ಸಕ್ಕರೆ ಅಂಶವುಳ್ಳ ಪದಾರ್ಥಗಳನ್ನು ಸೇವಿಸಬೇಡಿ ಇವುಗಳ ಅತಿಯಾದ ಸೇವನೆಯಿಂದ ದೇಹ ನಿರ್ಜಲೀಕರಣಗೊಳ್ಳಬಹುದು ಅಥವಾ ಹೊಟ್ಟೆ ನೋವು ಕಂಡುಬರಬಹುದು.ಗರ್ಭಿಣಿಯರು ಆರೋಗ್ಯ ಸಮಸ್ಯೆಯಿಂದ ಬಳಲುವವರು ಮತ್ತು ನಿಗಧಿತ ಸಮಸ್ಯೆಗಳಿಗೆ ಔಷಧಿಗಳನ್ನು ತೆಗೆದುಕೊಳ್ಳುವವರು ವೈದ್ಯರ ಸಲಹೆ ಮೇರೆಗೆ ಮನೆಯ ಹೊರಗಡೆ ಕೆಲಸ ಮಾಡಲು ಆದ್ಯತೆ ನೀಡಿ. ಬೇಸಿಗೆಯಲ್ಲಿ ಕಲುಷಿತ ನೀರಿನ ಸೇವನೆಯಿಂದ ಸಂಭಾವ್ಯ ವಾಂತಿ-ಬೇಧಿ ಪ್ರಕರಣಗಳು ಉಂಟಾಗುವ ಹಿನ್ನಲೆಯಲ್ಲಿ ಶುದ್ಧೀಕರಿಸದೇ ಇರುವ ಅಥವಾ ಕೆರೆ, ಕುಂಟೆಗಳ ನೀರನ್ನು ನೇರವಾಗಿ ಕುಡಿಯಬೇಡಿ. ರಸ್ತೆ ಬದಿ ತೆರೆದಿಟ್ಟ ಆಹಾರ ಪದಾರ್ಥ ಮತ್ತು ಕತ್ತಿರಿಸಿಟ್ಟ ಹಣ್ಣುಗಳನ್ನು ತಿನ್ನಬಾರದು.

**ಸಾಮಾನ್ಯ ಅಪಾಯದ ಚಿಹ್ನೆಗಳು:** ವಯಸ್ಕರಲ್ಲಿ ಅರೆಪ್ರಜ್ಞಾವಸ್ಥೆ, ಪ್ರಜ್ಞೆ ತಪ್ಪುವುದು, ಸಿಡಿಮಿಡಿಗೊಳ್ಳುವುದು, ಗಾಬರಿಗೊಳ್ಳುವುದು, ಅತಿಯಾದ ತಲೆನೋವು, ಚರ್ಮವು ಬಿಸಿ ಹಾಗೂ ಕೆಂಪಾದ ಒಣಚರ್ಮ, ಆತಂಕ, ತಲೆಸುತ್ತುವಿಕೆ, ಮಾಂಸಖಂಡಗಳಲ್ಲಿ ಸುಸ್ತು ಅಥವಾ ಸೆಳೆತ, ವಾಕರಿಕೆ ಮತ್ತು ವಾಂತಿ, ಮಕ್ಕಳಲ್ಲಿ ಆಹಾರ ಸೇವಿಸಲು ನಿರಾಕರಿಸುವುದು, ಕನಿಷ್ಠ ಮೂತ್ರ ವಿಸರ್ಜನೆ, ಬಾಯಿ ಒಣಗುವಿಕೆ, ಆಲಸ್ಯ, ಮೂರ್ಛೆ ಹೋಗುವುದು, ದೇಹದ ಯಾವುದೇ ಭಾಗದಲ್ಲಿ ರಕ್ತಸ್ರಾವ ಕಂಡುಬರುತ್ತವೆ.ಎಲ್ಲಾ ತಾಲ್ಲೂಕು ಸಾರ್ವಜನಿಕ ಆಸ್ಪತ್ರೆ, ಸಮುದಾಯ ಆರೋಗ್ಯ ಕೇಂದ್ರ ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಬೇಸಿಗೆಯಲ್ಲಿ ಬರಬಹುದಾದ ರೋಗಗಳ ಆರೈಕೆಗಾಗಿ, ಓಆರ್‌ಎಸ್, ಐವಿ ಫ್ಲೂಯಿಡ್ಸ್ ಮತ್ತು ಜೀವರಕ್ಷಕ ಔಷಧಗಳ ದಾಸ್ತಾನು ಇಟ್ಟುಕೊಳ್ಳುವಂತೆ ಹಾಗೂ ಆರೋಗ್ಯಾದಿಕಾರಿಗಳು ನೀರಿನ ಗುಣಮಟ್ಟದ ಪರೀಕ್ಷೆಯನ್ನು ನಿಯಮಿತವಾಗಿ ಮಾಡುವಂತೆ ಸೂಚನೆ ನೀಡಲಾಗಿದೆ ಜಿಲ್ಲಾ ಆರೋಗ್ಯಾಧಿಕಾರಿ ಡಾ.ರೇಣುಪ್ರಸಾದ್ ತಿಳಿಸಿದ್ದಾರೆ.

## ಕಡ್ಡಾಯವಾಗಿ ಮತ ಚಲಾಯಿಸಿ, ಉತ್ತಮ ಸರ್ಕಾರಕ್ಕೆ ಸಹಕರಿಸಿ

**ಹೊಸದುರ್ಗ** : ಏ. 26 ರಂದು ಮತದಾನ ನಡೆಯಲಿದೆ. ಸಾಲು ರಜೆಗಳಿದ್ದು, ಜನರು ಮತದಾನ ಮಾಡದೇ ಹೊರ ಹೋಗಬೇಡಿ. ಮತದಾನ ಪ್ರತಿಯೊಬ್ಬರ ಹಕ್ಕು, ಕಡ್ಡಾಯವಾಗಿ ಮತ ಚಲಾಯಿಸಿ, ಉತ್ತಮ ಸರ್ಕಾರ ನಿರ್ಮಾಣಕ್ಕೆ ಸಹಕರಿಸಿ ಎಂದು ಸಹಾಯಕ ಚುನಾವಣಾಧಿಕಾರಿ ಮಹೇಂದ್ರ ಕುಮಾರ್ ಮನವಿ ಮಾಡಿದರು.

ತಾಲ್ಲೂಕು ಆಡಳಿತ, ತಾ.ಪಂ, ಸ್ವೀಪ್ ಸಮಿತಿ ಹಾಗೂ ಹೊಸದುರ್ಗ ಪುರಸಭೆ ವತಿಯಿಂದ ಮಂಗಳವಾರ ಆಯೋಜಿಸಿದ್ದ 'ಮತದಾನ ಜಾಗೃತಿ ಕಾರ್ಯಕ್ರಮ'ದಲ್ಲಿ ಭಾಗವಹಿಸಿ ಮಾತನಾಡಿದರು.

ದೇಶ ಉಳಿದು, ಪ್ರಜಾಪ್ರಭುತ್ವ ಗಟ್ಟಿಯಾಗಿ ನೆಲೆಗೊಳ್ಳಲು ಚುನಾವಣೆ ಹಾಗೂ ಮತದಾನ ಅತ್ಯಂತ ಪ್ರಾಮುಖ್ಯತೆ ವಹಿಸಿವೆ. ಒಂದೊಂದು ಮತಕ್ಕೂ ಮೌಲ್ಯವಿದೆ. ಮತದಾನ ಮಾಡದೇ ಇರುವವರಿಗೆ ಪ್ರಶ್ನೆ ಮಾಡುವ ನೈತಿಕತೆ ಇರುವುದಿಲ್ಲ. ಹಾಗಾಗಿ ಮತದಾನ ಮಾಡಿ, ನಿಮ್ಮ ಹಕ್ಕು ಚಲಾಯಿಸಿ ಎಂದು ಸಲಹೆ ನೀಡಿದರು.

## ಪ್ರಮುಖ ಸುದ್ದಿ

### ತೊರೆ-ಚೆಕ್ ಡ್ಯಾಂಗಳಲ್ಲಿ ಈಜುವಾಗ ಮಕ್ಕಳ ಬಗ್ಗೆ ಪೋಷಕರಿಗೆ ಇರಲಿ ಎಚ್ಚರ.

# ಬೇಸಿಗೆಯ ರಜೆಯಲ್ಲಿ ಮಕ್ಕಳ ಚಟುವಟಿಕೆಗಳ ಬಗ್ಗೆ ಇರಲಿ ನಿಗಾ

» ಮಹದೇವಪುರ ಶಿವಮೂರ್ತಿ.

ನಮ್ಮ ಜನ ವಿಶೇಷ





ಪರಶುರಾಂಪುರ: ಬೇಸಿಗೆಯ ತಾಪ ದಿನದಿಂದ ದಿನಕ್ಕೆ ಹೆಚ್ಚುತ್ತಿದೆ. ಬಿಸಿಲಿಗೆ ಜನರು ಹೈರಾಣಾಗಿದ್ದಾರೆ.ಬಿಸಿಲಿನ ಜಳದಿಂದ ರಿಲೀಪ್ ಪಡೆಯಲು ಕೆಲವರು ರಿಲೀಪ್ ಪಡೆಯಲು ಪಂಪು ಪಾನೀಯಗಳ ಕಡೆ ಮುಖ ಮಾಡಿ ಹೋದರೆ.ಇನ್ನೂ ಕೆಲವರು ಸಮೀಪದಲ್ಲಿ ಹರಿಯುತ್ತಿರುವ ತೊರೆಯಲ್ಲಿ ಈಜಲು ಹೋಗುತ್ತಿದ್ದಾರೆ.ಶಾಲಾ-ಕಾಲೇಜು ರಜೆ ಇರುವ ಕಾರಣ ಈಜಲು ಹೋಗುತ್ತಾರೆ.ಈ ಬಗ್ಗೆ ಪೋಷಕರು ಎಚ್ಚರ ವಹಿಸುವುದು ಅತ್ಯವಶ್ಯಕವಾಗಿದೆ.

ಮಳೆ ಇಲ್ಲದೆ ಕೆರೆ ಕಟ್ಟೆಗಳು ಬತ್ತಿ ಹೋಗಿವೆ.ನೀರಿನ ಅಭಾವ ತಾಂಡವವಾಡುತ್ತಿದೆ.ಇದರ ನಡುವೆ ತಾಲೂಕಿನ ಪರಶುರಾಂಪುರ ಭಾಗದಲ್ಲಿ ಇರುವ ವೇದಾವತಿ ತೊರೆಗೆ ವಾಣಿವಿಲಾಸ ಸಾಗರದಿಂದ ವೇದಾವತಿಯ ತೊರೆಗೆ ಕುಡಿಯುವ ನೀರಿನ ಜೊತೆ ಅಂತರ್ಜಲ ಹೆಚ್ಚಳಕ್ಕೆ ನೀರು ಕಳೆದ ದಿನಗಳಿಂದ ಬಿಡಲಾಗಿದೆ.

ಆದರೆ ಬೇಸಿಗೆಯ ಧಗೆ ದಿನೇ ದಿನೇ ಹೆಚ್ಚುತ್ತಿದೆ.ನೀರುಹರಿಯುತ್ತಿರುವುದರಿಂದ ಜೊತೆ ಚೆಕ್ ಡ್ಯಾಂ ಗಳಲ್ಲಿ ನೀರು ನಿಂತ ಕಾರಣ ಮಕ್ಕಳು ಸೇರಿ ಅನೇಕರು ಈಜಲು ಹೋಗುತ್ತಿದ್ದಾರೆ.ಈಜು ಬಾರದವರು ತೆರಳುತ್ತಿರುವುದರಿಂದ ಈಗಾಗಲೇ ಅನಾಹುತಗಳನ್ನ ಆಗಿರುವುದನ್ನು ಕಾಣಬಹುದು.ಅದರಲ್ಲೂ ಅರಿವಿಲ್ಲದ ಮಕ್ಕಳು ಹೆಚ್ಚಾಗಿ ಈ ರೀತಿಯ ಸಮಸ್ಯೆಗೆ ಸಿಲುಕುತ್ತಿದ್ದಾರೆ.ಆದ್ದರಿಂದ ಪೋಷಕರು ಹೆಚ್ಚು ಎಚ್ಚರ ವಹಿಸಬೇಕು.

**ಈಜುವಾಗ ಹುಷಾರ್:** ಈಗಾಗಲೇ ಎಸ್‌ಎಸಎಲ್‌ಸಿ ಪರೀಕ್ಷೆ ಹೊರತು ಪಡಿಸಿ ಉಳಿದ ಬಹುತೇಕ ಉಳಿದ ಮಕ್ಕಳ ಪರೀಕ್ಷೆ ಮುಕ್ತಾಯಗೊಂಡಿದೆ. ರಜೆ ಇರುವುದರಿಂದ ಮಕ್ಕಳು ತೊರೆಯ ನೀರಿನ ಕಡೆ ಮುಖ ಮಾಡಿದ್ದಾರೆ.ಈ ಸಮಯದಲ್ಲಿ ದುರಂತಗಳಾಗದಂತೆ ಎಚ್ಚರಿಕೆ ವಹಿಸ ಬೇಕಾಗಿದೆ.

**ತೊರೆ ಹಾಗೂ ಚೆಕ್ ಡ್ಯಾಂಗಳಲ್ಲಿ ಈಜುವಾಗ ಎಚ್ಚರ:** ಪರಶುರಾಂಪುರ ಭಾಗದಲ್ಲಿ ಹರಿಯುವ ವೇದಾವತಿ ನದಿಗೆ ಜಿಲ್ಲೆ ಸೇರಿದಂತೆ ನೆರೆಯ ಆಂಧ್ರ ಪ್ರದೇಶದ ಜನರು ಸಹಾ ಬಿಸಿಲಿನ ಜಳದಿಂದ ರಿಲೀಪ್ ಗೆ ಕುಟುಂಬ ಸಮೇತರಾಗಿ ಬರುತ್ತಿದ್ದಾರೆ.ಈ ವೇಳೆಯಲ್ಲಿ ಚಿಕ್ಕ ಮಕ್ಕಳನ್ನ ಕರೆತರಬೇಡಿ.ಬಂದರೂ ಬಹಳ ಎಚ್ಚರಿಕೆಯಿಂದ ನೋಡಿಕೊಳ್ಳಬೇಕು.ನೀರಿನ ಆಳ ಜೊತೆ ಇನ್ನಿತರ ಬಗ್ಗೆ ಹೊರಗಿನವರಿಗೆ ಹಾಗೂ ಸ್ಥಳೀಯರಿಗೂ ಅಷ್ಟೊಂದು ಮಾಹಿತಿ ಸಿಗಲಾರದು ಆಗಾಗಿ ಈಜುವಾಗ ದೊಡ್ಡವರು,ಚಿಕ್ಕವರು ಎನ್ನದೇ ಹುಷಾರಾಗಿ ಈಜುವುದು ಒಳ್ಳೆಯದು.


Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T